ಸಂಪುಟ : 10 ಸಂಚಿಕೆ: 115 ಪುಟ : 4+2 ಬೆಲೆ: 3.00 ಶನಿವಾರ ಜೂನ್ 07 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 115 Pages : 4+2 Price : 3.00 SaturdayJune 07 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಾಲ ಸೌಲಭ್ಯ ಒದಗಿಸಲು ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ವಿವಿಧ ಯೋಜನೆಗಳಾದ ಶ್ರೀ ಶಹಜೀರಾಜೇ ಸಮೃದ್ಧಿ ಯೋಜನೆ, ಜೀಜಾವು ಜಲಭಾಗ್ಯ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ರಾಜಶ್ರೀ ಶಾಹು ಮಹಾರಾಜ ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ, ಮರಾಠ ಮಿಲ್ಟ್ರಿ ಹೋಟೆಲ್ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ ( ವಾಣಿಜ್ಯ ಬ್ಯಾಂಕ್ ಗಳ ಸಹಯೋಗದೊಂದಿಗೆ ), ಸ್ವಾವಲಂಬಿ ಸಾರಥಿ ಯೋಜನೆ, ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆಗಳಿಗೆ ಸೌಲಭ್ಯ ಒದಗಿಸಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜುಲೈ 4 ಕೊನೆಯ ದಿನವಾಗಿದ್ದು ಅರ್ಜಿಗಳನ್ನು https://www.kaushalkar.com ಮೂಲಕ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ಸಹಾಯವಾಣಿ 8867537799 / ದೂ.ಸಂ. 080-29903994 , ಯೋಜನೆಗಳ ಮಾರ್ಗಸೂಚಿಗಳು, ಸಲ್ಲಿಸಬೇಕಾದ ದಾಖಲೆಗಳು ಕುರಿತು ವಿವರಗಳಿಗೆ ಜಿಲ್ಲಾ ವ್ಯವಸ್ಥಾಪಕರ ಕಚೇರಿ ಸಂಖ್ಯೆ 08372-232327 ಹಾಗೂ https://kmcdc.karnataka.gov.in ಇಲ್ಲಿ ತಿಳಿಯಬಹುದಾಗಿದೆ.

### ಸಂಭ್ರಮಾಚರಣೆ ಕಾಲ್ತುಳಿತಕ್ಕೆ ರಾಜ್ಯ ಸರ್ಕಾರವೇ ಹೊಣೆ । ಜಿಲ್ಲಾ ಬಿಜೆಪಿ ಆರೋಪ, ಗಾಂಧಿ ವೃತ್ತದಲ್ಲಿ ಪ್ರತಿಭಟನೆ

# ಪೊಲೀಸ್ ಅಧಿಕಾರಿಗಳ 'ತಲೆದಂಡ' ಅನ್ಯಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಐಪಿಎಲ್ ವಿಜೇತ ಆರ್‌ಸಿಬಿ ತಂಡವನ್ನು ಅಭಿನಂದಿಸಲು ಏರ್ಪಡಿಸಿದ್ದ ಸಂಭ್ರಮಾಚರಣೆ ವೇಳೆ ಬೆಂಗಳೂರಿನಲ್ಲಿ ನಡೆದ ಕಾಲ್ತುಳಿತ ದುರಂತದಲ್ಲಿ 11 ಜನರ ಸಾವಿಗೆ ರಾಜ್ಯ ಕಾಂಗ್ರೆಸ್ ಸರ್ಕಾರವೇ ನೇರ ಹೊಣೆ ಎಂದು ಆರೋಪಿಸಿ ಬಿಜೆಪಿ ಕಾರ್ಯಕರ್ತರು ಶುಕ್ರವಾರ ನಗರದಲ್ಲಿ ಪ್ರತಿಭಟನೆ ನಡೆಸಿದರು.

ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ, ರಸ್ತೆ ಸಂಚಾರ ತಡೆದು ನಡೆಸಿದ ಪ್ರತಿಭಟನೆ ವೇಳೆ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಭಾವಚಿತ್ರವನ್ನು ಹರಿಯಲು ಯತ್ನಿಸಿದಾಗ ಪೊಲೀಸರು ತಡೆಯಲು ಮುಂದಾಗಿದ್ದು, ಕೆಲ ಕಾಲ ಗೊಂದಲದ ವಾತಾವರಣ ಸೃಷ್ಟಿಯಾಯಿತು.

'ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಗೃಹಸಚಿವರು ಘಟನೆಯ ಸಂಪೂರ್ಣ ಹೊಣೆಗಾರಿಕೆ ಹೊರಲಿ. ಮೃತರ ಕುಟುಂಬಸ್ಥರಿಗೆ ಹಾಗೂ ಗಾಯಾಳುಗಳಿಗೆ ಕೂಡಲೇ ಪರಿಹಾರ ನೀಡಲಿ, ಕರ್ತವ್ಯನಿಷ್ಠ ಪೊಲೀಸರೊಂದಿಗೆ ನಾವಿದ್ದೇವೆ' ಎಂಬ ಭಿತ್ತಿಪತ್ರಗಳನ್ನು ಪ್ರದರ್ಶಿಸಿ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದರು. ಈ ಸಂದರ್ಭದಲ್ಲಿ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಆರ್‌ಸಿಬಿ ಸಂಭ್ರಮಾಚರಣೆಗೆ



ಪೊಲೀಸ್ ಇಲಾಖೆ ಪರವಾನಗಿ ನೀಡಲು ಒಪ್ಪದಿದ್ದರೂ, ಒತ್ತಾಯದಿಂದ ಮತ್ತು ಆತುರದಿಂದ ಸಂಭ್ರಮಾಚರಣೆ ಏರ್ಪಡಿಸಿ 11 ಜನ ಅಮಾಯಕ ಅಭಿಮಾನಿಗಳ ಸಾವಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಗೃಹಮಂತ್ರಿ ಜಿ. ಪರಮೇಶ್ವರ ಅವರೇ ಕಾರಣರಾಗಿದ್ದಾರೆ. ಅವರು ಕೂಡಲೇ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು.

ಕಾಲ್ತುಳಿತ ಪ್ರಕರಣದ ಎಫ್‌ಐಆರ್‌ನಲ್ಲಿ ರ್‍ಯಾಲಿಗೆ ಅವಕಾಶ ನೀಡದಿರುವುದು ಸ್ಪಷ್ಟವಾಗಿದ್ದರೂ ಪೊಲೀಸ್ ಅಧಿಕಾರಿಗಳ ತಲೆದಂಡ ಮಾಡಿರುವುದು ಅನ್ಯಾಯ ಎಂದು ಶಾಸಕ ಸಿ.ಸಿ. ಪಾಟೀಲ ಹೇಳಿದರು.

ನಗರಸಭೆ ಸದಸ್ಯ ಚಂದ್ರು ತಡಸದ ಮಾತನಾಡಿ, ಬೆಂಗಳೂರಿನಲ್ಲಿ ಐಪಿಎಲ್ ವಿಜೇತ ತಂಡ ಆರ್‌ಸಿಬಿ ವಿಜಯಯಾತ್ರೆಯನ್ನು 'ಕಗ್ಗೊಲೆಯ ಯಾತ್ರೆ'ಯನ್ನಾಗಿ ಮಾಡಿದ ರಾಜ್ಯ ಸರ್ಕಾರವನ್ನು ವಜಾ ಮಾಡಬೇಕು. ಮುಂದಿನ ದಿನಗಳಲ್ಲಿ ಕೋರ್ಟ್‌ನಿಂದ ಅಂತಹ ತೀರ್ಪು ಬರಲಿದೆ ಎಂದು ಹೇಳಿದರು. ಎಂ.ಎಸ್. ಕರಿಗೌಡ್ರ ಮಾತನಾಡಿ, ತಮ್ಮ ತಪ್ಪನ್ನು ನಿಷ್ಠಾವಂತ ಅಧಿಕಾರಿಗಳ ಮೇಲೆ ಹಾಕಿರುವ ರಾಜ್ಯ ಸರ್ಕಾರವನ್ನು ಕಾಲರ್ ಹಿಡಿದು ಕೇಳಬೇಕಿದೆ. ಗೃಹಮಂತ್ರಿ ಅವರು ಈವರೆಗೂ ಇಲಾಖೆ ಜವಾಬ್ದಾರಿ ಕುರಿತು ಮಾತನಾಡಿಲ್ಲ. ಸಚಿವ ಸಂಪುಟದ ಏಳೆಂಟು ಮಂತ್ರಿಗಳು ಈ ಹಿಂದೆ ಭದ್ರತಾ ವೈಫಲ್ಯ ಎಂದು ಹೇಳಿದವರು ಈಗ ಎಲ್ಲಿಯೂ ಕಾಣುತ್ತಿಲ್ಲ. ಅವರೆಲ್ಲರೂ ಸರ್ಕಾರವನ್ನು ನಡೆಸಲು ಯೋಗ್ಯರಲ್ಲ. ಪ್ರಾಣಹಾನಿಗೆ ಸಿಎಂ ಹೊಣೆ ಹೊತ್ತು ರಾಜೀನಾಮೆ ನೀಡಿದರೆ ಅವರಿಗೆ ಸದ್ಗತಿ ಸಿಗುತ್ತದೆ ಎಂದು ವ್ಯಂಗ್ಯವಾಡಿದರು.

ಪ್ರತಿಭಟನೆಯಲ್ಲಿ ಅಶೋಕ ನವಲಗುಂದ, ಬಿಜೆಪಿ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ನಿರ್ಮಲಾ ಕೊಳ್ಳಿ, ಪ್ರಮುಖರಾದ ಎಂ.ಎಂ. ಹಿರೇಮಠ, ಲಿಂಗರಾಜ ಪಾಟೀಲ, ಆರ್.ಕೆ. ಚವ್ಹಾಣ, ವಸಂತ ಮೇಟಿ, ಸುರೇಶ ಮರಳಪ್ಪನವರ, ಬೂದಪ್ಪ ಹಳ್ಳಿ, ಬಿ.ಎಚ್. ಲದವಾ, ಅನಂದಪ್ಪ ಹಾರೋಗೇರಿ, ಸಂತೋಷ ಅಕ್ಕಿ, ರಾಘವೇಂದ್ರ ಯಳವತ್ತಿ, ಮಂಜುನಾಥ ಕೋಟ್ನಿಕಲ್, ವಸಂತ ಪಡಗದ, ಸುರೇಶ ಚಿತ್ತರಗಿ, ವಿದ್ಯಾವತಿ ಗಡಗಿ, ವಿಜಯಲಕ್ಷ್ಮೀ ದಿಂಡೂರ, ಸ್ವಾತಿ ಅಕ್ಕಿ ಸೇರಿದಂತೆ ಮುಖಂಡರು ಮತ್ತು ಕಾರ್ಯಕರ್ತರು ಪಾಲ್ಗೊಂಡಿದ್ದರು.

> ಅಧಿಕಾರ ಶಾಶ್ವತವಲ್ಲ. ಈ ಕಹಿ ಘಟನೆಯ ಹೊಣೆ ಹೊತ್ತು ಮೂವರು ರಾಜೀನಾಮೆ ನೀಡಬೇಕು. ಆರ್‌ಸಿಬಿ ಪ್ರಮುಖರನ್ನು ಬಂಧಿಸಬೇಕು. ಅಲ್ಲದೆ, ಕೇರಳದಲ್ಲಿ ಆನೆ ತುಳಿತಕ್ಕೆ ಒಳಗಾದವರಿಗೆ 25 ಲಕ್ಷ ಪರಿಹಾರ ನೀಡಿರುವ ರಾಜ್ಯ ಸರ್ಕಾರ, ನಮ್ಮ ರಾಜ್ಯದಲ್ಲಿಯೇ ಮೃತಪಟ್ಟ ಅಭಿಮಾನಿಗಳಿಗೆ ಕೇವಲ ಹತ್ತು ಲಕ್ಷ ನೀಡಿರುವುದು ಯಾವ ನ್ಯಾಯ ಎಂದು ಶಾಸಕ ಸಿ.ಸಿ. ಪಾಟೀಲ ಸರ್ಕಾರವನ್ನು ಪ್ರಶ್ನಿಸಿದರು.

### ಜುಲೈ 15ರೊಳಗೆ ಎಲ್ಲ ಶಾಲಾ ಕೊಠಡಿ ದುರಸ್ತಿ ಮಾಡಿ: ಜಿ.ಪಂ. ಸಿಇಓ ಭುವನೇಶ ಪಾಟೀಲ ಸೂಚನೆ

# ಮಕ್ಕಳಿಗೆ ತೊಂದರೆಯಾಗದಂತೆ ಕ್ರಮ ವಹಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಳೆಗಾಲದಲ್ಲಿ ಜಿಲ್ಲೆಯ ಯಾವುದೇ ಶಾಲೆಯಲ್ಲಿ ಮಕ್ಕಳ ಪಾಠಕ್ಕೆ ತೊಂದರೆ ಉಂಟಾದರೆ ಆಯಾ ತಾಲೂಕಿನ ಬಿಇಓ, ಡಿಡಿಪಿಐ ಅವರನ್ನು ಜವಾಬ್ದಾರಿಗೊಳಿಸಿ, ಕ್ರಮಕೈಗೊಳ್ಳಲಾಗುವುದು. ಎಲ್ಲ ಕ್ಷೇತ್ರಶಿಕ್ಷಣಾಧಿಕಾರಿಗಳು ಪ್ರತಿ ಶಾಲೆಗೆ ಭೇಟಿ ನೀಡಿ, ವಾಸ್ತವಿಕ ವರದಿ ಪಡೆದು, ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಹೇಳಿದರು.

ಅವರು ಶುಕ್ರವಾರ ಜಿ.ಪಂ ಸಭಾಂಗಣದಲ್ಲಿ ಶಾಲಾ ಕಟ್ಟಡಗಳ ಕಾಮಗಾರಿ ಹಾಗೂ ಕೊಠಡಿಗಳ ದುರಸ್ತಿ ಕುರಿತು ಶಿಕ್ಷಣ ಇಲಾಖೆ ಹಾಗೂ ವಿವಿಧ ಅನುಷ್ಠಾನ



ಏಜನ್ಸಿಗಳ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ ಮಾತನಾಡಿದರು.

ಈಗಾಗಲೇ ಶಾಲೆಗಳು ಆರಂಭಾಗಿವೆ. ಮುಂದಿನ ದಿನಗಳಲ್ಲಿ ಮಳೆ ಪ್ರಮಾಣ ಹೆಚ್ಚಾಗುವ ಸಾಧ್ಯತೆ ಇದೆ. ಆದ್ದರಿಂದ ಮಕ್ಕಳಿಗೆ ತೊಂದರೆ ಆಗದಂತೆ ಶಿಕ್ಷಣ ಇಲಾಖೆ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕು. ಇಂದೇ ಈ ಕುರಿತು ಕ್ರಿಯಾಯೋಜನೆ ರೂಪಿಸಿ, ಬರುವ ಜುಲೈ 15ರೊಳಗೆ ಸೋರಿಕೆ ಆಗುವ ಮತ್ತು ಶಿಥಿಲಾವಸ್ಥೆಯ ಮಾಳಿಗೆ, ಗೋಡೆಗಳನ್ನು ದುರಸ್ತಿಗೊಳಿಸಿ, ವರದಿ ಸಲ್ಲುಸಬೇಕೆಂದು ಅವರು ನಿರ್ದೇಶನ ನೀಡಿದರು.

ಈಗಾಗಲೇ ಹಲವಾರು ಬಾರಿ ಈ ಕುರಿತು ಸೂಚನೆ ನೀಡಿದ್ದರೂ, ಸರಿಯಾದ ಪಾಲನೆ ಆಗಿಲ್ಲ. ಶಾಲೆಯ ಸೋರಿಕೆ ಅಥವಾ ಶಿಥಿಲ ಕಟ್ಟಡದಿಂದ ಯಾವುದೇ ವಿದ್ಯಾರ್ಥಿಗಳಿಗೆ ತೊಂದರೆ ಉಂಟಾದರೆ, ಅದನ್ನು ಗಂಭೀರವಾಗಿ ಪರಿಗಣಿಸಿ, ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸಿಇಓ ಎಚ್ಚರಿಸಿದರು.

ಸಭೆಯಲ್ಲಿ ಜಿ.ಪಂ ಉಪ ಕಾರ್ಯದರ್ಶಿ ಬಿ.ಎಸ್. ಮೂಗನೂರಮಠ, ಮುಖ್ಯ ಯೋಜನಾಧಿಕಾರಿ ದೀಪಕ ಮಡಿವಾಳರ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ವಿಜಯಕುಮಾರ, ಪಂಚಾಯತ ರಾಜ್ ಇಂಜಿನಿಯರಿಂಗ್ ಇಲಾಖೆ ಕಾರ್ಯಪಾಲಕ ಅಭಿಯಂತರ ಆರ್.ಎಂ. ಸೊಪ್ಪಿಮಠ, ಕ್ರೇಡಿಲ್ ಇಇ ಸುಜಾತಾ ಕಾಳೆ, ನಿರ್ಮಿತಿ ಕೇಂದ್ರದ ಜಿಲ್ಲಾ ವ್ಯವಸ್ಥಾಪಕ ಶಿವಕುಮಾರ ಪಾಟೀಲ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಉಮೇಶ ಬೊಮ್ಮಕ್ಕನವರ, ಅಶೋಕ ಸಿಂದಗಿ, ರಾಮಕೃಷ್ಣ ಸದಲಗಿ, ಶಿವಾನಂದ ಮಲ್ಲಾಡ, ಮಹಾದೇವಿ ಮಾಡಲಗಿ, ಉಮಾದೇವಿ ಬಸಾಪುರ ಸೇರಿದಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳು, ವಿವಿಧ ಇಲಾಖೆಗಳ ಸಹಾಯಕ ಕಾರ್ಯಪಾಲಕ ಅಭಿಯಂತರರು ಇದ್ದರು.

> ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎಸ್.ಎಸ್. ಕೆಳದಿಮಠ ಮಾತನಾಡಿ, ಜಿಲ್ಲೆಯಲ್ಲಿ 217 ಕಿರಿಯ, 521 ಹಿರಿಯ ಮತ್ತು 112 ಪ್ರೌಢಶಾಲೆಗಳು ಸೇರಿ ಒಟ್ಟು 850 ಶಾಲೆಗಳಿವೆ. ಇವುಗಳ ಪೈಕಿ ಹಿಂದಿನ ವರ್ಷ 85 ಶಾಲೆಗಳ 286 ಕೊಠಡಿಗಳನ್ನು ರಿಪೇರಿ ಮಾಡಲಾಗಿದೆ.
>
> ಪ್ರಸಕ್ತ ವರ್ಷ 147 ಶಾಲೆಗಳ 495 ಕೊಠಡಿಗಳ ದುರಸ್ತಿಗೆ ಗುರುತಿಸಲಾಗಿದೆ. ಅಗತ್ಯ ಕ್ರಿಯಾಯೋಜನೆ, ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು ಎಂದು ಹೇಳಿದರು.

# ಕಸಾಪ: ಮಹಾ-ಮಾತು ಇಂದು

■ವಿಜಯಸಾಕ್ಷಿ ಸುದ್ದಿ, ಗದಗ




ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಸಂಶೋಧನಾ ಕೃತಿಗಳನ್ನು ಪರಿಚಯಿಸುವ ಹಿನ್ನೆಲೆಯಲ್ಲಿ ವಿನೂತನ 'ಮಹಾ-ಮಾತು' ಕಾರ್ಯಕ್ರಮವನ್ನು ಜೂನ್ 7ರಂದು ಸಂಜೆ 6.30ಕ್ಕೆ ಕಸಾಪ ಕಾರ್ಯಾಲಯದ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನದಲ್ಲಿ ಆಯೋಜಿಸಲಾಗಿದೆ.

'ಕನ್ನಡ ಗಜಲ್‌ಗಳಲ್ಲಿ ವಸ್ತು ಮತ್ತು ಅಭಿವ್ಯಕ್ತಿ' ಕುರಿತಾಗಿ ಮಹಾಪ್ರಬಂಧವನ್ನು ರಚಿಸಿ ಹಂಪಿ ಕನ್ನಡ ವಿಶ್ವವಿದ್ಯಾಲಯದಿಂದ ಡಾಕ್ಟರೇಟ್ ಪದವಿ ಹೊಂದಿರುವ ಡಾ. ವಿನಾಯಕ ಕಮತದ ಅವರು ತಮ್ಮ ಸಂಶೋಧನಾ ಕೃತಿಯ ಕುರಿತು ಮಾತನಾಡುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು. ಪರಿಷತ್ತಿನ ಸದಸ್ಯರು, ಆಸಕ್ತರು, ಸಾಹಿತ್ಯಾಭಿಮಾನಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಕಾರ್ಯದರ್ಶಿ ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ, ಡಿ.ಎಸ್. ಬಾಪುರಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಪ್ರತಿಭಾ ಪುರಸ್ಕಾರ ಇಂದು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಬೀಚಿ ಬಳಗದ ವತಿಯಿಂದ ಜೂನ್ 7ರಂದು ಬೆಳಿಗ್ಗೆ 10.30ಕ್ಕೆ ಪಟ್ಟಣದ ಹಿರೇಮಠದ ಸಭಾಭವನದಲ್ಲಿ ಪ್ರತಿಭಾ ಪುರಸ್ಕಾರ ಜರುಗಲಿದೆ ಎಂದು ಬಳಗದ ಸಂಚಾಲಕ ಈಶ್ವರ ಬೆಟಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕಳೆದ ಮಾರ್ಚ್-ಏಪ್ರಿಲ್‌ನಲ್ಲಿ ಜರುಗಿದ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇ. 90 ಮತ್ತು ಅದಕ್ಕಿಂತಲೂ ಹೆಚ್ಚಿನ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಜರುಗಲಿದೆ. ಸಮಾರಂಭವನ್ನು ಪಟ್ಟಣದ ಖ್ಯಾತ ವೈದ್ಯರಾದ ಡಾ. ಕೃಷ್ಣ ಜಿ.ಕಾಳೆ ಉದ್ಘಾಟಿಸಲಿದ್ದು, ನಿವೃತ್ತ ಮುಖ್ಯ ಶಿಕ್ಷಕ ಆರ್.ಬಿ. ಪ್ರಭಣ್ಣವರ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಅಧ್ಯಕ್ಷತೆ ವಹಿಸಲಿದ್ದಾರೆ.

ವಿದ್ಯಾರ್ಥಿಗಳ ಪಾಲಕರು, ಬಳಗದ ಸದಸ್ಯರು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲು ಸಂಚಾಲಕರು ವಿನಂತಿಸಿದ್ದಾರೆ.

### ಲಕ್ಕುಂಡಿ ಗ್ರಾಮ ಪಂಚಾಯಿತಿಯಲ್ಲಿ ವಿಶ್ವ ಪರಿಸರ ದಿನಾಚರಣೆ

# ಹಸಿರು ಪರಿಸರ ನಿರ್ಮಾಣಕ್ಕೆ ಮುಂದಾಗಿ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಉತ್ತಮ ಪರಿಸರ ನಿರ್ಮಾಣದಿಂದ ಆರೋಗ್ಯವಂತ ಸಮಾಜ ನಿರ್ಮಾಣವಾಗುತ್ತದೆ. ಆದ್ದರಿಂದ ಗ್ರಾಮಸ್ಥರು ತಮ್ಮ ಮನೆಯ ಸುತ್ತಮುತ್ತ ಸ್ವಚ್ಛತೆಯನ್ನು ಕಾಪಾಡಿ, ಪ್ರತಿಯೊಬ್ಬರೂ ಹಸಿರು ಪರಿಸರವನ್ನು ನಿರ್ಮಿಸುವಲ್ಲಿ ಮುಂದಾಗಬೇಕೆಂದು ಜಿಲ್ಲಾ ನೌಕರರ ಸಂಘದ ಮಾಜಿ ಅಧ್ಯಕ್ಷ ರವಿ ಗುಂಜಿಕರ್ ಸಲಹೆ ನೀಡಿದರು.

ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಸ್ವಚ್ಛ ಭಾರತ ಮಿಷನ್(ಗ್ರಾಮೀಣ) ಯೋಜನೆಯ ಸಹಯೋಗದಿಂದ ಇಲ್ಲಿಯ ಗ್ರಾಮ ಪಂಚಾಯಿತಿಯು ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪಂಚಾಯಿತಿ ಆವರಣದಲ್ಲಿ ಸಸಿಗಳನ್ನು ನೆಡುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಗ್ರಾಮದ ನೈರ್ಮಲ್ಯವನ್ನು ಕಾಪಾಡಿ ಸ್ವಚ್ಛ, ಸುಂದರ ಗ್ರಾಮವನ್ನಾಗಿ ಪರಿವರ್ತನೆ ಮಾಡಬೇಕಾಗಿದೆ. ಸರ್ಕಾರದ ಯೋಜನೆಗಳನ್ನು ಜನರಿಗೆ ತಲುಪಿಸಲು ಗ್ರಾಮ ಪಂಚಾಯಿತಿಯ ನಿಕಟವರ್ತಿಯಾಗಿ ಕೆಲಸ ಮಾಡಲು ಹಾಗೂ ಸಮರ್ಪಕವಾಗಿ ಅನುಷ್ಠಾನಗೊಳಿಸಲು ಎಲ್ಲರ ಸಹಕಾರ ಅವಶ್ಯವಾಗಿದೆ ಎಂದರು.

ಜಿಲ್ಲಾ ಪಂಚಾಯಿತಿಯ ಸ್ವಚ್ಛ ಭಾರತ ಮಿಷನ್ ಯೋಜನೆಯ ಜಿಲ್ಲಾ ಸಂಯೋಜಕ ಕೃಷ್ಣ ದೊಡ್ಡಮನಿ ಅವರು ಯೋಜನೆಯ ರೂಪುರೂಪರೇಷೆಗಳನ್ನು ತಿಳಿಸುತ್ತ, ಪ್ಲಾಸ್ಟಿಕ್ ತ್ಯಾಜ್ಯವನ್ನು ಸಮರ್ಪಕವಾಗಿ, ವೈಜ್ಞಾನಿಕವಾಗಿ

▸▸3ನೇ ಪುಟಕ್ಕೆ

> ಪ್ಲಾಸ್ಟಿಕ್ ತ್ಯಾಜ್ಯ, ಹಸಿ ಕಸ-ಒಣ ಕಸವನ್ನು ಮನೆ ಮನೆಯಿಂದ ಸಂಗ್ರಹಿಸುವ ಕಾರ್ಯವನ್ನು ಇನ್ನು ಮುಂದೆ ಗ್ರಾಮ ಪಂಚಾಯಿತಿ ಮಟ್ಟದ ಮಹಿಳಾ ಸಂಜೀವಿನಿ ಒಕ್ಕೂಟಕ್ಕೆ ವಹಿಸಲಾಗಿದೆ. ಗ್ರಾಮ ಪಂಚಾಯಿತಿ ವಾಹನದ ಮೂಲಕ ತರಬೇತಿ ಹೊಂದಿದ ಮಹಿಳಾ ಚಾಲಕರಿಂದ ಚಲಿಸಿಕೊಂಡು ತ್ಯಾಜ್ಯ ವಸ್ತು ಘಟಕಕ್ಕೆ ಸಾಗಿಸಿ ಗ್ರಾಮದ ನೈರ್ಮಲ್ಯವನ್ನು ಕಾಪಾಡಲು ಮುಂದಾಗಬೇಕು ಎಂದು ಪಿ.ಡಿ.ಒ ಅಮೀರ ನಾಯಕ ಹೇಳಿದರು.

### ಗ್ರಾಮ ದೇವತಾ ಟೋಪ ಜಾತ್ರಾ ಮಹೋತ್ಸವದ ಧರ್ಮಸಭೆ-2ರಲ್ಲಿ ಅಭಿನವ ಬೂದೀಶ್ವರ ಶ್ರೀಗಳು

# ಜಗತ್ತಿಗೆ ನಾಗರಿಕತೆಯನ್ನು ಕಲಿಸಿದ ದೇಶ ಭಾರತ

■ವಿಜಯಸಾಕ್ಷಿ ಸುದ್ದಿ, ಮುಳಗುಂದ



ಜಗತ್ತಿಗೆ ನಾಗರಿಕತೆಯನ್ನು ಕಲಿಸಿದ ದೇಶ ಭಾರತವಾಗಿದೆ ಎಂದು ಎಂದು ಹೊಸಳ್ಳಿಯ ಜಗದ್ಗುರು ಬೂದೀಶ್ವರ ಸಂಸ್ಥಾನಮಠದ ಜಗದ್ಗುರು ಅಭಿನವ ಬೂದೀಶ್ವರ ಮಾಹಾಸ್ವಾಮಿಗಳು ಹೇಳಿದರು.

ಅವರು ಪಟ್ಟಣದ ಗ್ರಾಮ ದೇವತಾ ಟೋಪ ಜಾತ್ರಾ ಮಹೋತ್ಸವದ ಧರ್ಮಸಭೆ-2ರಲ್ಲಿ ಜಾತ್ರಾ ಸಮಿತಿಯ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರನ್ನು ಸನ್ಮಾನಿಸಿ ಮಾತನಾಡಿದರು.

ಭಾರತ ಕಣ ಕಣದಲ್ಲೂ ದೇವರನ್ನು ಕಾಣುವ ಸುಸಂಸ್ಕೃತ ದೇಶವಾಗಿದೆ. ಜಗತ್ತಿಗೆ ಗುರುತ್ವವನ್ನು ಕೊಟ್ಟ ದೇಶ, ಹೆಣ್ಣು ಮಕ್ಕಳಲ್ಲಿ ದೈವತ್ವವನ್ನು ಕಂಡ ದೇಶ, ಭಾರತ ದೇಶದ ಹೆಸರು ಕೇಳಿದಾಕ್ಷಣ ಜಗತ್ತು ತನಗರಿವಿಲ್ಲದಂತೆ ತಲೆಬಾಗುತ್ತದೆ. ಇಂತಹ ನಾಡಿನಲ್ಲಿ ಹುಟ್ಟಿದ ನಾವು ಪುಣ್ಯವಂತರು. ನಾವೆಲ್ಲರೂ ಧರ್ಮವಂತರಾಗಿ ಬದುಕಬೇಕು. ಈ ಗ್ರಾಮ ದೇವತೆ ಟೋಪ ಜಾತ್ರೆ ಮಾಡುವ ಮೂಲಕ ನಾಡಿನ ಸಮೃದ್ಧಿ, ಸಂಪತ್ತು ಹೆಚ್ಚಾಗುತ್ತದೆ ಎಂದರು.

ರಾಜ್ಯೋತ್ಸವ ಪುರಸ್ಕೃತ ಖ್ಯಾತ ಹಿಂದೂಸ್ತಾನಿ ಗಾಯಕ ಬಾಲಚಂದ್ರ ನಾಕೋಡ ಹಾಗೂ ವಿಜಯಲಕ್ಷ್ಮೀ ಹಿರೇಮಠ ಇವರಿಂದ ಸಂಗಿತ ಸೇವೆ ಜರುಗಿತು. ನಂತರ ಗ್ರಾಮ ದೇವತೆಗಳ ಭವ್ಯ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಕಲ ವಾದ್ಯ ಮೇಳಗಳೊಂದಿಗೆ ದೇವತೆಗಳು ದೇವಸ್ಥಾನ ಪ್ರವೇಶ ಮಾಡಿದರು.

ಸಾನ್ನಿಧ್ಯವನ್ನು ಮುಳಗುಂದ ಗವಿಮಠದ ಮಲ್ಲಿಕಾರ್ಜುನ ಮಾಹಾಸ್ವಾಮಿಗಳು ವಹಿಸಿದ್ದರು, ಸಮ್ಮುಖವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು, ಅಧ್ಯಕ್ಷತೆಯನ್ನು ಗೌರಮ್ಮಾ ಬಡ್ನಿ ವಹಿಸಿದ್ದರು. ರಾಜಣ್ಣಾ ಕೋರವಿ, ಸಿಪಿಐ ಸಂಗಮೇಶ ಶಿವಯೋಗಿ, ಫಕ್ಕೀರಯ್ಯ ಅಮೋಘಿಮಠ, ಪಿ.ಎ. ವಂಟಕರ, ಪಿ.ಎಸ್. ಮರಿದೇವರಮಠ, ಹಸನಸಾಬ ಶೇಖ, ಮಾಹಾದೇವಪ್ಪ ಗಡಾದ, ಗುಳಪ್ಪ ಮಜ್ಜಿಗುಡ್ಡ, ಮಂಜುನಾಥ ಮಟ್ಟಿ ಇದ್ದರು.

> ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗೇರ ಮಾತನಾಡಿ, ಭಾರತ ದೇಶದಲ್ಲಿ ಹೆಣ್ಣು ಮಕ್ಕಳಿಗೆ ದೇವಿಯ, ತಾಯಿಯ ಸ್ಥಾನಮಾನ ನೀಡಿ ನಿತ್ಯ ಗೌರವಿಸುವ ದೇಶವಾಗಿದೆ. ಜಗನ್ಮಾತೆಯ ಟೋಪ ಜಾತ್ರೆಯನ್ನು ಇಲ್ಲಿ ಸೌಹಾರ್ದತೆಯಿಂದ ಆಚರಿಸುವ ಮೂಲಕ ಸಹಬಾಳ್ವೆಗೆ ಇನ್ನೊಂದು ಹೆಸರಾಗಿದೆ. ದೇವಿಯ ಆರಾಧನೆಯಿಂದ ಮಳೆ, ಬೆಳೆ, ಸಂಪತ್ತು, ಆರೋಗ್ಯ ವೃದ್ಧಿಯಾಗುತ್ತದೆ ಎಂದರು.

## ಸಂಪಾದಕೀಯ

# ರಾಜ್ಯದ ಆಡಳಿತಾರೂಢರ ಹೊಣೆಗಾರಿಕೆ ಎಲ್ಲಿದೆ?

ಬೆಂಗಳೂರಿನಲ್ಲಿ ಇತ್ತೀಚೆಗೆ ನಡೆದ ಐಪಿಎಲ್ ವಿಜಯೋತ್ಸವದ ಕಾಲ್ತುಳಿತ ದುರಂತ ಮತ್ತು ಕರಾವಳಿ ಭಾಗದಲ್ಲಿ ಆಗಾಗ್ಗೆ ತಲೆದೋರುವ ಗಲಭೆಗಳ ನಂತರ, ರಾಜ್ಯ ಸರ್ಕಾರ ಪೊಲೀಸರನ್ನೇ ಬಲಿಪಶು ಮಾಡುತ್ತಿದೆ ಎಂಬ ಗಂಭೀರ ಆರೋಪಗಳು ಕೇಳಿಬರುತ್ತಿವೆ.

ಘಟನೆಗಳ ನಂತರ ಕೆಲವು ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸುವುದು ಅಥವಾ ವರ್ಗಾವಣೆ ಮಾಡುವುದು ಆಡಳಿತಗಾರರ ಜವಾಬ್ದಾರಿಯಿಂದ ನುಣುಚಿಕೊಳ್ಳುವ ಸುಲಭ ಮಾರ್ಗವಾಗಿದೆಯೇ ಎಂಬ ಪ್ರಶ್ನೆ ಎದುರಾಗಿದೆ.

ಬೆಂಗಳೂರಿನಲ್ಲಿ 11 ಅಮಾಯಕರ ಜೀವ ಬಲಿಪಡೆದ ಕಾಲ್ತುಳಿತ ಪ್ರಕರಣದಲ್ಲಿ, ಬಿಜೆಪಿ ನಾಯಕರು ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಮತ್ತು ಗೃಹಸಚಿವರ ರಾಜೀನಾಮೆಗೆ ಆಗ್ರಹಿಸಿದ್ದಾರೆ. ಪೊಲೀಸರು ರ್‍ಯಾಲಿಗೆ ಪರವಾನಗಿ ನೀಡಲು ಹಿಂದೇಟು ಹಾಕಿದ್ದರೂ, ರಾಜಕೀಯ ಒತ್ತಡದಿಂದ ವಿಜಯೋತ್ಸವಕ್ಕೆ ಅವಕಾಶ ನೀಡಲಾಯಿತು ಎಂಬ ಆರೋಪವಿದೆ.

ಒಂದು ವೇಳೆ ಇದು ನಿಜವಾಗಿದ್ದರೆ, ಈ ದುರಂತಕ್ಕೆ ನೇರ ಹೊಣೆಗಾರಿಕೆ ರಾಜಕೀಯ ನಾಯಕತ್ವದ್ದೇ ಹೊರತು, ಸರ್ಕಾರದ ಆದೇಶಗಳನ್ನು ಪಾಲಿಸಬೇಕಾದ ಪೊಲೀಸರದ್ದಲ್ಲ. ಆದರೆ, ಘಟನೆ ನಂತರ ಕೆಲವು ಪೊಲೀಸ್ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. ಇದು ದಕ್ಷ ಅಧಿಕಾರಿಗಳ ನೈತಿಕ ಸ್ಥೈರ್ಯ ಕುಗ್ಗಿಸುತ್ತಿದೆ ಎಂಬ ಆರೋಪಕ್ಕೆ ಪುಷ್ಠಿ ನೀಡುತ್ತದೆ.

ಕರಾವಳಿ ಭಾಗದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವುದು ಸವಾಲಿನ ಕೆಲಸ. ಸಣ್ಣ ಪುಟ್ಟ ಘಟನೆಗಳೂ ಸುಲಭವಾಗಿ ಕೋಮು ಗಲಭೆಗಳಾಗಿ ಪರಿವರ್ತಿತವಾಗುವ ಸೂಕ್ಷ್ಮ ಪ್ರದೇಶವದು. ಇಂತಹ ಸಂದರ್ಭಗಳಲ್ಲಿ ಪೊಲೀಸರು ಹಗಲಿರುಳು ದುಡಿಯುತ್ತಾರೆ. ಕೆಲವೊಮ್ಮೆ ರಾಜಕೀಯ ಹಸ್ತಕ್ಷೇಪ, ಜನಪ್ರತಿನಿಧಿಗಳ ಹೇಳಿಕೆಗಳು ಪರಿಸ್ಥಿತಿಯನ್ನು ಇನ್ನಷ್ಟು ಬಿಗಡಾಯಿಸುತ್ತವೆ. ಅಂತಹ ಸಂದರ್ಭಗಳಲ್ಲಿ, ಪರಿಸ್ಥಿತಿಯನ್ನು ನಿಯಂತ್ರಿಸಲು ವಿಫಲರಾದರು ಎಂಬ ಕಾರಣ ನೀಡಿ ಪೊಲೀಸರನ್ನೇ ಹೊಣೆಗಾರರನ್ನಾಗಿ ಮಾಡುವುದು ಎಷ್ಟರಮಟ್ಟಿಗೆ ಸರಿ?

ಮೂಲಭೂತವಾಗಿ, ಗಲಭೆಗಳನ್ನು ತಡೆಯುವ ಅಥವಾ ನಿಯಂತ್ರಿಸುವ ಸಾಮರ್ಥ್ಯ ಪೊಲೀಸರಿಗಿದ್ದರೂ, ಅದಕ್ಕೆ ಪೂರಕವಾದ ರಾಜಕೀಯ ಇಚ್ಛಾಶಕ್ತಿ ಮತ್ತು ಕಠಿಣ ನಿಲುವು ಆಡಳಿತಗಾರರಿಂದ ಬರಬೇಕು.

ಪೊಲೀಸ್ ಇಲಾಖೆ ಎಂಬುದು ಬಲಿಪಶುಗಳ ಸಮೂಹವಲ್ಲ. ಅದು ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ, ಸಮಾಜಕ್ಕೆ ಭದ್ರತೆಯನ್ನು ಒದಗಿಸುವ ಪ್ರಮುಖ ಸಂಸ್ಥೆ. ಅದರ ನೈತಿಕ ಸ್ಥೈರ್ಯವನ್ನು ಕುಗ್ಗಿಸುವುದು ಮತ್ತು ಕೇವಲ ಆಡಳಿತಗಾರರ ತಪ್ಪನ್ನು ಮುಚ್ಚಿಹಾಕಲು ಅವರನ್ನು ಬಳಸಿಕೊಳ್ಳುವುದು ರಾಜ್ಯದ ಭವಿಷ್ಯಕ್ಕೆ ಮಾರಕ. ತಪ್ಪು ಮಾಡಿದವರಿಗೆ ಶಿಕ್ಷೆಯಾಗಬೇಕು, ಆದರೆ ಅದು ನಿಜವಾದ ತಪ್ಪಿತಸ್ಥರಿಗೆ ಆಗಬೇಕು. ರಾಜಕೀಯ ನಾಯಕತ್ವ ತಮ್ಮ ಜವಾಬ್ದಾರಿಯನ್ನು ಹೊರಬೇಕೇ ಹೊರತು, ಪೊಲೀಸರ ಮೇಲೆ ಗೂಬೆ ಕೂರಿಸಿ ತಪ್ಪಿಸಿಕೊಳ್ಳಬಾರದು.

ಸರಕಾರಗಳು ತಮ್ಮ ಕಾರ್ಯವೈಖರಿಯನ್ನು ಪ್ರಾಮಾಣಿಕವಾಗಿ ವಿಮರ್ಶಿಸಿಕೊಳ್ಳಬೇಕು. ಪೊಲೀಸರಿಗೆ ಸ್ವಾಯತ್ತತೆ, ಅಗತ್ಯ ಸಂಪನ್ಮೂಲ ಮತ್ತು ರಾಜಕೀಯ ಹಸ್ತಕ್ಷೇಪವಿಲ್ಲದೆ ಕೆಲಸ ಮಾಡಲು ಅವಕಾಶ ನೀಡಿದಾಗ ಮಾತ್ರ ಅವರು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸಾಧ್ಯ. ಇಲ್ಲವಾದರೆ, ಇಂತಹ ಘಟನೆಗಳು ಪುನರಾವರ್ತನೆಯಾಗುತ್ತಲೇ ಇರುತ್ತವೆ ಮತ್ತು 'ಪೊಲೀಸರು ಬಲಿಪಶುಗಳು' ಎಂಬ ಮಾತು ಮುಂದುವರಿಯುತ್ತದೆ. ಇದು ಪ್ರಜಾಪ್ರಭುತ್ವದ ಆಡಳಿತಕ್ಕೆ ಎಂದಿಗೂ ಒಳ್ಳೆಯದಲ್ಲ.

## ಜೂನ್ 7ರಂದು ಬಕ್ರೀದ್ ಹಬ್ಬದ ನಿಮಿತ್ತ ವಿಶೇಷ ಲೇಖನ

# ತ್ಯಾಗದ ಪ್ರತೀಕ ಬಕ್ರೀದ್



ಮುಸಲ್ಮಾರ ದೊಡ್ಡ ಹಬ್ಬವಾಗಿ ಬಕ್ರೀದ್ ಅಥವಾ ಈದುಲ್ ಅಝ್‌ಹಾವನ್ನು ಜಗತ್ತಿನಾದ್ಯಂತ ಸಡಗರದಿಂದ ಆಚರಿಸಲಾಗುತ್ತಿದೆ. ಇಸ್ಲಾಮೀ ಕ್ಯಾಲೆಂಡರ್‌ನ ದುಲ್‌ಹಜ್ ತಿಂಗಳ 10ರಂದು ಬಕ್ರೀದ್ ಆಚರಿಸಲಾಗುತ್ತದೆ. ವಿಶೇಷ ಪ್ರಾರ್ಥನೆ, ಪ್ರಾರ್ಥನೆಯ ಒಂದು ಭಾಗವಾಗಿ ದೇವರ ಸಂಪ್ರೀತಿಗಾಗಿ ಯಾವ ತ್ಯಾಗಕ್ಕೂ ಸಿದ್ಧ ಎಂಬುದನ್ನು ದೃಢಪಡಿಸುವುದು ಈ ಹಬ್ಬದ ವೈಶಿಷ್ಟ್ಯವಾಗಿದೆ.

5 ಸಾವಿರ ವರ್ಷಗಳ ಹಿಂದಿನ ಘಟನೆಯನ್ನು ಬಕ್ರೀದ್ ಹಬ್ಬ ನೆನಪಿಸುತ್ತದೆ. ಅದು ಪ್ರವಾದಿ ಇಬ್ರಾಹೀಮ್ ಅವರ ತ್ಯಾಗ, ಬಲಿದಾನದ ಸವಿನೆನಪು. ಇಂದು ಜಗತ್ತಿನ ಮೂರರಲ್ಲಿ ಎರಡರಷ್ಟು ಜನರು ಅಂದರೆ, ಯಹೂದಿಯರು, ಕ್ರೈಸ್ತರು ಮತ್ತು ಮುಸಲ್ಮಾನರು ಏಕಪ್ರಕಾರವಾಗಿ ಇಬ್ರಾಹೀಮ್ (ಅಬ್ರಾಹಮ್) ಅವರನ್ನು ಗೌರವಿಸುತ್ತಾರೆ. ಇರಾಕ್‌ನ ಪುರೋಹಿತ್ ಅಝುರ್ ಎಂಬಾತನ ಪುತ್ರನೇ ಇಬ್ರಾಹಿಂ. ಅವರಿದ್ದ ಉರ್ ನಗರವನ್ನು ದುಷ್ಟ ರಾಜ ನಮ್ರೂದ್ ಆಳುತ್ತಿದ್ದ. ತಾನೇ ದೇವ ಎನ್ನುತ್ತಿದ್ದ ಆತ, ಸಕಲ ಪ್ರಜೆಗಳು ತನ್ನ ದಾಸರೆಂದು ಬಗೆದು ಹಿಂಸಿಸುತ್ತಿದ್ದ. ಇಂತಹ ಸಂದರ್ಭದಲ್ಲಿ ಅಲ್ಲಾಹನು ಇಬ್ರಾಹೀಮ್ ಅವರನ್ನು ಪ್ರವಾದಿಯನ್ನಾಗಿ ನೇಮಿಸಿ, ಅವರ ಮೂಲಕ ಸಮಾಜ ಸುಧಾರಣೆ ಕಾರ್ಯ ಕೈಗೊಂಡಿದ್ದ. ಹಬ್ಬದ ದಿನ ಬೆಳಿಗ್ಗೆ ಮಸೀದಿ ಹಾಗೂ ಈದ್ಗಾಗಳಲ್ಲಿ ವಿಶೇಷ ನಮಾಜ್ ಹಾಗೂ ಖುತ್ಬಾ (ಪ್ರವಚನ) ಏರ್ಪಡಿಸಲಾಗುತ್ತದೆ. ಮಕ್ಕಳು, ಹಿರಿಯರು ಹೊಸ ಉಡುಗೆ ತೊಟ್ಟು ಪ್ರಾರ್ಥಯಲ್ಲಿ ಪಾಲ್ಗೊಳ್ಳುವರು ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡು ಗೆಳೆಯರ ಮತ್ತು ಸಂಬಂಧಿಕರ ಮನೆಗೆ ಭೇಟಿ ನೀಡಿ ಸೌಹಾರ್ದತೆ ಸಂದೇಶವನ್ನು ಸಾರುತ್ತಾರೆ.

ಮುಸ್ಲಿಮರ ಪವಿತ್ರ ಹಜ್ ಯಾತ್ರೆಯ ಸಂದರ್ಭದಲ್ಲಿ ಈ ಹಬ್ಬ ಆಚರಿಸಲಾಗುತ್ತದೆ. ವಿಶ್ವದಾದ್ಯಂತ ಮುಸ್ಲಿಮರು ಈ ಹಬ್ಬ ಆಚರಿಸುವ ಸಂದರ್ಭದಲ್ಲಿ ಮಕ್ಕಾದಲ್ಲಿ ಹಜ್ ಯಾತ್ರಿಕರು ವಿವಿಧ ಧಾರ್ಮಿಕ ವಿಧಿ-ವಿಧಾನಗಳನ್ನು ಪೂರೈಸುತ್ತಾರೆ. ಜೀವನದಲ್ಲಿ ಒಂದು ಬಾರಿಯಾದರೂ ಹಜ್ ಯಾತ್ರೆಯನ್ನು ಕೈಗೊಳ್ಳಬೇಕು ಎಂದು ಇಸ್ಲಾಂ ಹೇಳುತ್ತದೆ. ಅರ್ಥಹೀನ ಮೂಢನಂಬಿಕೆಗಳು, ಕಂದಾಚಾರಗಳು, ಅನಾಚಾರಗಳಿಂದ ತತ್ತರಿಸಿ ಹೋಗಿದ್ದ ಸಮಾಜದ ಸುಧಾರಣೆ ಮಾಡಬೇಕು ಎಂದು ಪ್ರವಾದಿ ಹಝ್ರತ್ ಇಬ್ರಾಹೀಮ್ ಅವರಿಗೆ ಅಲ್ಲಾಹನ ಅಪ್ಪಣೆಯಾಗಿತ್ತು.

ಅಂದಿನ ಕಠಿಣ ಪರಿಸ್ಥಿತಿಯಲ್ಲಿ ದೇವನೊಬ್ಬನೆ ಎಂಬ ಅವರ ಮಾತಿಗೆ ಬೆಲೆ ಸಿಗದೆ, ಅವರನ್ನು ಮನೆಯಿಂದ ಹೊರ ಹಾಕಲಾಗುತ್ತದೆ. ತಂದೆ-ತಾಯಿ, ಮನೆ-ಆಸ್ತಿ ಎಲ್ಲ ಬಿಟ್ಟು ಹೊರಟ ಅವರನ್ನು ಬೆಂಕಿಗೆ ಹಾಕಿ ಸುಡುವ ಪ್ರಯತ್ನ ನಡೆಯುತ್ತದೆ. ಅದರಿಂದ ದೇವಾದೇಶದಂತೆ ರಕ್ಷಣೆ ಲಭಿಸಿದಾಗ, ದೇಶದಿಂದಲೇ ಗಡಿಪಾರು ಮಾಡಲಾಗುತ್ತದೆ. ಇಂತಹ ಸಂದರ್ಭದಲ್ಲಿ ಪ್ರವಾದಿ ಇಬ್ರಾಹೀಮರು ಎದೆಗುಂದಲಿಲ್ಲ, ದೇವನನ್ನು ಸದಾ ಸ್ಮರಿಸುತ್ತ ಸಮಾಜದ ಕಡೆ, ಜನರ ಕಡೆ ಕಾಳಜಿ ಮತ್ತು ಆರಾಧನೆಯಲ್ಲಿ ತಮ್ಮನ್ನು ತಾವು ಅರ್ಪಿಸುತ್ತಾರೆ.

ಉರಿಯುವ ಬಿಸಿಲಿನಲ್ಲಿ ಮಗು ಅಳುತ್ತಿದ್ದಾಗ, ತಾಯಿ ಹಾಜೀರಾ ನೀರನ್ನು ಅರಸುತ್ತಾ ಹೋರಟರು ಸಫಾ ಮತ್ತು ಮರ್ವಾ ಎಂಬ ಬೆಟ್ಟಗಳ ಮಧ್ಯ ಓಡಾಡಿದರು. (ಅವರ ಓಡಾಟದ ನೆನಪನ್ನು ಇಂದು ಕೂಡಾ ಓಡಾಟದ ಮೂಲಕ ಸ್ಮರಣೆ ಮಾಡುವುದು ಹಜ್ ಯಾತ್ರಿಕರ ಒಂದು ಕ್ರಿಯೆಯಾಗಿದೆ). ಇತ್ತ ಬಾಯಾರಿದ ಶಿಶು ಇಸ್ಮಾಯಿಲ್ ತನ್ನ ಕಾಲನ್ನು ನೆಲಕ್ಕೆ ಬಡಿದಾಗ ನೀರಿನ ಚಿಲುಮೆಯೊಂದು ಚಿಮ್ಮತೊಡಗುತ್ತದೆ. ಮಗುವಿನ ಸಮೀಪ ಚಿಮ್ಮುತ್ತಿದ್ದ ನೀರು ಕಂಡು ಆನಂದಭರಿತರಾಗಿ ತಾಯಿ ಹಾಜಿರಾ 'ಝುಮ್ ಝುಮ್' ಎಂದು ಕರೆಯುತ್ತಾರೆ. ಮುಂದೆ ಅದೇ ಝುಮ್ ಝುಮ್ ಪ್ರದೇಶ ಪಟ್ಟಣವಾಗಿ ಇಂದಿನ ಮಕ್ಕಾ ಪವಿತ್ರ ಸ್ಥಳವಾಗಿ ಬೆಳೆಯಿತು.

ಅಲ್ಲಾಹನ ಆಜ್ಞೆಯಂತೆ ಪ್ರವಾದಿ ಇಬ್ರಾಹೀಮರು ತಮ್ಮ ಪ್ರೀತಿಯ ಪುತ್ರ ಇಸ್ಮಾಯಿಲ್‌ರನ್ನು ಬಲಿಕೊಡಲು ಹೊರಟಾಗ ಮಧ್ಯ ಸೈತಾನನ ದುಷ್ಪ್ರೇರಣೆ ಉಂಟಾಯಿತು. ಕಲ್ಲೆಸೆಯುವ ಮೂಲಕ ಅದನ್ನು ಮೆಟ್ಟಿ ನಿಂತರು. ಮಗುವನ್ನು ನೆಲದಲ್ಲಿ ಮಲಗಿಸಿ, ಇನ್ನೇನು ಕೊರಳು ಕೊಯ್ಯಬೇಕು ಎನ್ನುವಷ್ಟರಲ್ಲಿ, 'ಓ ಇಬ್ರಾಹೀಮ ನೀನು ಈ ಸತ್ವಪರೀಕ್ಷೆಯಲ್ಲೂ ಉತ್ತೀರ್ಣರಾಗಿದ್ದೀಯಾ. ನೀನು ನಮ್ಮ ಆಜ್ಞೆಯನ್ನು ಚೆನ್ನಾಗಿ ಪಾಲಿಸಿರುವೆ. ನಿನ್ನ ಮಗನ ಬದಲಿಗೆ ಈ ಟಗರನ್ನು ಬಲಿಯರ್ಪಿಸು, ನೀನು ಮುಸ್ಲಿಂ (ದೇವಾಜ್ಞೆಗೆ ಶರಣಾಗುವವ)ನಾಗಿರುವೆ. ಇನ್ನು ನೀವಿಬ್ಬರೂ ಕೂಡಿ ನನ್ನ ದಾಸ್ಯರಾಧನೆಗಾಗಿ ಒಂದು ಮಂದಿರವನ್ನು ನಿರ್ಮಿಸಿರಿ' ಎಂಬ ದೇವಾಜ್ಞೆಯಾಗುತ್ತದೆ, ಅದೇ ಕಾಬಾ ಮಂದಿರ. ಬಲಿ ಅರ್ಪಿಸಿದ ಪ್ರಾಣಿಯಿಂದ ಲಭಿಸಿದ ಮಾಂಸವನ್ನು ಸಮನಾಗಿ ಮೂರು ಪಾಲು ಮಾಡಬೇಕು. ಅದರಲ್ಲಿ ಒಂದು ಪಾಲನ್ನು ಸ್ವತಃ ಬಳಸಿಕೊಳ್ಳಬಹುದು. ಎರಡನೇಯ ಪಾಲನ್ನು ಸಂಬಂಧಿಕರು ಹಾಗೂ ಮೂರನೇಯ ಪಾಲು ಬಡವರಿಗೆ ಹಂಚಬೇಕು. ಹಬ್ಬದೂಟದಿಂದ ಯಾರೂ ವಂಚಿತರಾಗಬಾರದು ಎಂಬ ಮೂಲ ಉದ್ದೇಶ ಇದರಲ್ಲಿ ಅಡಗಿದೆ.

**- ಡಾ. ತಯಬಅಲಿ ಅ. ಹೊಂಬಳ,**
ಗದಗ.

# ಪರಿಸರ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿ




■ **ವಿಜಯಸಾಕ್ಷಿ ಸುದ್ದಿ, ಗದಗ**

ಆಧುನಿಕತೆಯ ಉತ್ತುಂಗ ತಲುಪಿರುವ ಈ ಕಾಲದಲ್ಲಿ ಪರಿಸರ ಸ್ನೇಹಿ ಚಟುವಟಿಕೆಗಳ ಅವಶ್ಯಕತೆ ಹೆಚ್ಚಿದೆ. ಪರಿಸರ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಬಿಜೆಪಿ ಮುಖಂಡರಾದ ವಿಜಯಕುಮಾರ ಗಡ್ಡಿ ನುಡಿದರು.

ಅವರು ಇಲ್ಲಿನ ವಾರ್ಡ್ ನಂ.33ರಲ್ಲಿ ಆಯೋಜಿಸಿದ್ದ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಪರಿಸರ ದಿನಾಚರಣೆ ನಿಸರ್ಗದ ಉಳಿವಿನ ಕುರಿತು ಜಾಗೃತಿ ಮೂಡಿಸಲು ಇರುವ ವಿಶೇಷ ದಿನ. ಆದರೆ ಪರಿಸರದ ಉಳಿವಿನ ಚಿಂತನೆ ಇದೊಂದೇ ದಿನಕ್ಕೆ ಸೀಮಿತವಾಗಬಾರದು. ವಿಶೇಷವಾಗಿ ವಿದ್ಯಾರ್ಥಿಗಳು ಹಾಗೂ ಯುವ ಜನತೆ ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಹೊಂದಬೇಕು ಎಂದರು.

ವಿದ್ಯಾಗಣಪತಿ ಸೇವಾ ಟ್ರಸ್ಟ್ ಅಧ್ಯಕ್ಷ ಮಂಜುನಾಥ ಮತ್ತೂರ, ಉಪಾಧ್ಯಕ್ಷ ವಿಶ್ವನಾಥ ಟೆಂಗಿನಕಾಯಿ, ಗೌರವಾಧ್ಯಕ್ಷ ಹಿರೇಮಠ, ನಗರಸಭಾ ಸದಸ್ಯರಾದ ಅನಿತಾ ಗಡ್ಡಿ, ಸರಕಾರಿ ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯರಾದ ಹೊಸಮನಿ, ಉಪನ್ಯಾಸಕರಾದ ಗಂಗನಗೌಡ್ರ ಸೇರಿದಂತೆ ಭೋದಕ-ಭೋದಕೇತರ ಸಿಬ್ಬಂದಿ, ವಿದ್ಯಾರ್ಥಿಗಳು, ಅರಣ್ಯ ಇಲಾಖೆಯ ಗಸ್ತು ಅರಣ್ಯ ಪಾಲಕರಾದ ವೀರೇಶ ಪಾಟೀಲ, ಶ್ರೀ ವಿದ್ಯಾಗಣಪತಿ ಸೇವಾ ಟ್ರಸ್ಟ್‌ನ ಕಾರ್ಯದರ್ಶಿ ಮಲ್ಲಿಕಾರ್ಜುನ ಪಾಟೀಲ, ಖಜಾಂಚಿ ಮಲ್ಲೇಶ್ ವಗ್ಗನವರ, ಟ್ರಸ್ಟ್‌ನ ಉದ್ಯಾನವನ ಸಮಿತಿಯ ಶಂಕರಯ್ಯ ಕೂಡ್ಲಪ್ಪನವರ ಹಾಗೂ ಸ್ಥಳೀಯ ನಿವಾಸಿಗಳು ಪಾಲ್ಗೊಂಡಿದ್ದರು.

# ಆಕ್ಷೇಪಣೆಗೆ ಜೂ.17 ಕೊನೆಯ ದಿನ

■ **ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ರಾಜ್ಯ ಮಟ್ಟದ ಮಾನವ ಸಂಪನ್ಮೂಲ Rop -2024-25 ಅನುಮೋದನೆಯಂತೆ ಮಕ್ಕಳ ಆರೋಗ್ಯ ಕಾರ್ಯಕ್ರಮದ ಎನ್.ಬಿ.ಎಸ್.ಯು ವಿಭಾಗದಲ್ಲಿ ಒಟ್ಟು 12 ಶುಶ್ರೂಷಕ ಅಧಿಕಾರಿಗಳ ಹುದ್ದೆಗಳು ಅನುಮೋದನೆಯಾಗಿದ್ದು, ಸದರಿ ಹುದ್ದೆಗಳನ್ನು ರೋಷ್ಟರ್ ಕಂ ಮೆರಿಟ್ ಆಧರಿಸಿ ನಿಬಂಧನೆಗೊಳಪಟ್ಟು ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಸದರಿ ಹುದ್ದೆಗಳಿಗೆ ಅಪ್ಲೋಡ್ ಆಗಿರುವ ಅರ್ಜಿಗಳಲ್ಲಿ ರೋಷ್ಟರ್ ಕಂ ಮೆರಿಟ್ ಅಳವಡಿಸಿ ತಯಾರಿಸಿದ ರೋಷ್ಟರ್ ಸಂಖ್ಯೆ 09,10&14ರ ಅರ್ಹ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಗಳನ್ನು ಜೂನ್ 17 ರವರೆಗೆ ಕಚೇರಿ ದಿನಗಳಲ್ಲಿ ಖುದ್ದಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ, ಕಚೇರಿ, ಜಿಲ್ಲಾಡಳಿತ ಭವನ, ರೂಮ್. ನಂ:101 ಹುಬ್ಬಳ್ಳಿ ರೋಡ್, ಗದಗ ಇಲ್ಲಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿ ಹಾಗೂ ವಿವರಗಳನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಲಗತ್ತಿಸಲಾಗಿದೆ.

# ಅರ್ಜಿ ಆಹ್ವಾನ

■ **ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಸ್ವಯಂ ಉದ್ಯೋಗ ನೇರ ಸಾಲ ( ಬ್ಯಾಂಕ್ ಗಳ ಸಹಯೋಗದೊಂದಿಗೆ ), ಅರಿವು- ಶೈಕ್ಷಣಿಕ ನೇರ ಸಾಲ ಯೋಜನೆ ( ನೂತನ) ಅರಿವು- ಶೈಕ್ಷಣಿಕ ನೇರ ಸಾಲ ಯೋಜನೆ ( ನವೀಕರಣ), ವಿದೇಶಿ ವ್ಯಾಸಂಗ ಸಾಲ ಯೋಜನೆ, ಗಂಗಾ ಕಲ್ಯಾಣ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಾತಂತ್ರ್ಯ ಅಮೃತ ಮುನ್ನಡೆ ಯೋಜನೆ ಸೇರಿದಂತೆ ವಿವಿಧ ಯೋಜನೆಗಳಿಗೆ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 3 ಕೊನೆಯ ದಿನವಾಗಿದ್ದು ಅರ್ಜಿಯನ್ನು www.kaushalkar.com ನಲ್ಲಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ ಸೈಟ್ https://upparadevelopment.karnataka.gov.in ರಲ್ಲಿ ಅಥವಾ ನಿಗಮದ ಕೇಂದ್ರ ಕಚೇರಿಯ ದೂರವಾಣಿ ಸಂಖ್ಯೆ 080-22252555ದಿಂದ ಪಡೆಯಬಹುದಾಗಿದೆ.

ಜಿಲ್ಲೆಗಳಲ್ಲಿ ನಿಗಮದ ಜಿಲ್ಲಾ ವ್ಯವಸ್ಥಾಪಕರು, ಡಿ .ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕಚೇರಿ ದೂರವಾಣಿ ಸಂಖ್ಯೆ 08372-232327 ಸಂಪರ್ಕಿಸಬಹುದಾಗಿದೆ.

# ನಿವೃತ್ತ ಶಿಕ್ಷಕ ಹಳ್ಳದರಿಗೆ ಬೀಳ್ಕೊಡುಗೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸೋ.ಸ. ಕ್ಷತ್ರಿಯ ಶ್ರೀ ಜಗದಂಬಾ ಶಿಕ್ಷಣ ಕೇಂದ್ರದ ಕನ್ನಡ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆ ಶಿಕ್ಷಕ ಎಚ್. ಎಮ್. ಹಳ್ಳದ ಇವರು ಇತ್ತೀಚೆಗೆ ನಿವೃತ್ತಿ ಹೊಂದಿದ ಹಿನ್ನೆಲೆಯಲ್ಲಿ ಶಾಲಾ ಆಡಳಿತ ಮಂಡಳಿ ಹಾಗೂ ಶಾಲಾ ಸಿಬ್ಬಂದಿಗಳ ಪರವಾಗಿ ಅವರನ್ನು ಸನ್ಮಾನಿಸಿ, ಬೀಳ್ಕೊಡಲಾಯಿತು.

ಸುಮಾರು 22 ವರ್ಷಗಳ ಕಾಲ ಶಿಕ್ಷಕರಾಗಿ ಸುದೀರ್ಘ ಸೇವೆ ಸಲ್ಲಿಸಿ ವಿದ್ಯಾರ್ಥಿಗಳಿಗೆ ಉತ್ತಮ ಶಿಕ್ಷಣವವನ್ನು ಧಾರೆ ಎರೆದಿದ್ದ ಇವರ ಸೇವೆಯನ್ನು ಶ್ಲಾಘಿಸಲಾಯಿತು. ಕಾರ್ಯಕ್ರಮದಲ್ಲಿ ಸಂಸ್ಥೆಯ ಚೇರಮನ್ ಫಕೀರಸಾ ಭಾಂಡಗೆ, ಆಡಳಿತ ಮಂಡಳಿ ಸದಸ್ಯರಾದ ಮಾರುತಿ ಪವಾರ, ಪರಶುರಾಮ ಬದಿ, ಬಿ.ಎಸ್. ಲದ್ವಾ, ಅನಿಲ ಖಟವಟೆ, ಶಾಲಾ ಮುಖ್ಯೋಪಾಧ್ಯಾಯರು, ಶಿಕ್ಷಕರು, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.



ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ ಅವರ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯ ಅಧ್ಯಕ್ಷ ಸಿ.ಎಸ್. ಷಡಕ್ಷರಿ ನೇತೃತ್ವದ ನಿಯೋಗವು ಭೇಟಿ ಮಾಡಿ ಶುಭಾಶಯ ಕೋರಿ ಅಭಿನಂದಿಸಿತು. ಸಂಘದ ಗದಗ ಜಿಲ್ಲಾಧ್ಯಕ್ಷ ಹಾಗೂ ಗದಗ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ಡಾ. ಬಸವರಾಜ ಬಳ್ಳಾರಿ, ಪ್ರಧಾನ ಕಾರ್ಯದರ್ಶಿ ಹೆಚ್.ಗಿರಿಗೌಡ, ಗೌರವಾಧ್ಯಕ್ಷ ಎಸ್.ಬಸವರಾಜ, ಹಿರಿಯ ಉಪಾಧ್ಯಕ್ಷ ಆರ್. ಮೋಹನಕುಮಾರ, ಉಪಾಧ್ಯಕ್ಷ ಚೇತನ, ಚಲಪತಿ, ರಾಘವೇಂದ್ರ ಸೇರಿದಂತೆ ಸಂಘದ ಪದಾಧಿಕಾರಿಗಳಿದ್ದರು.

## ನರೇಗಲ್ಲ: ವಿವಿಧ ಶಾಲೆಗಳಲ್ಲಿ ವಿಶ್ವ ಪರಿಸರ ದಿನ ಆಚರಣೆ

# ಆಧುನಿಕ ಬದುಕಿನಿಂದ ಪರಿಸರ ನಾಶ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನರೇಗಲ್ಲ ಸುತ್ತಮುತ್ತಲಿನ ಭಾಗಗಳಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ: ಶಾಲೆಯ ವಿಜ್ಞಾನ ಶಿಕ್ಷಕ ಕೆ.ಡಿ. ದಿನಾಚರಣೆಯನ್ನುದ್ದೇಶಿಸಿ ಅರವಟಗಿಮಠ ಮಾತನಾಡಿ, ಪರಿಸರ ದಿನ ಪ್ರತಿ ವರ್ಷ ಜೂನ್ 5ಕ್ಕೆ ಮಾತ್ರ ಸೀಮಿತವಾಗಬಾರದು. ಸಮೀಪದ ಕಪ್ಪತಗುಡ್ಡ ಇಡೀ ಏಷ್ಯಾ ಖಂಡದಲ್ಲಿ ಶುದ್ಧ ವಾಯು ನೀಡಿ ಎಲ್ಲ ಸಕಲ ಜೀವಿಗಳಿಗೆ ಆಶ್ರಯ ನೀಡಿದ ಹೆಗ್ಗಳಿಕೆಗೆ ಪಾತ್ರವಾಗಿದೆ. ಇತ್ತೀಚಿನ ದಿನಗಳಲ್ಲಿ ಮಾನವನು ಆಧುನಿಕ ಬದುಕಿನ ಗೀಳಿಗೆ ಬಿದ್ದು ಪರಿಸರವನ್ನು ನಾಶ ಮಾಡುತ್ತಿದ್ದಾನೆ. ಈಗ ಮಾನವನ ಈ ದುರಾಸೆಯಿಂದ ಪರಿಸರದ ಪ್ರತಿಯೊಂದು ಅಂಶವೂ ಕಲುಷಿತಗೊಂಡಿದೆ ಎಂದರು.

ಪ್ರಾಚಾರ್ಯ ಡಿ.ಬಿ. ಅಡವಿ ಮಾತನಾಡಿದರು. ನಿಲಯ ಪಾಲಕ ಅಶೋಕ ತಂಬಾಕು, ಎಸ್.ಎ. ಪಟ್ಟಣಶೆಟ್ಟರ, ಆರ್.ಎ. ನಮಾಜಿ, ಎಂ.ವಾಯ್. ಬೆಟದೂರ, ಎ.ಎಸ್. ತಡಹಾಳ, ಎಸ್.ಸಿ. ವಸ್ತ್ರದ, ಸಿದ್ದಲಿಂಗೇಶ ಕಣವಿ, ಎ.ಡಿ. ಯತ್ನಟ್ಟಿ, ಎಂ.ಪಿ. ಶಿವಶರಣರ, ಪ್ರವೀಣ ಕಂಬ್ಳಿ ಹಾಗೂ ಸಿಬ್ಬಂದಿ, ವಿದ್ಯಾರ್ಥಿಗಳು ಇದ್ದರು.



### ಕೆಜಿಎಂಎಸ್ ಶಾಲೆಯಲ್ಲಿ

ಪಟ್ಟಣದ ಕೆಜಿಎಂಎಸ್ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. ಮುಖ್ಯ ಶಿಕ್ಷಕ ಬಿ.ಬಿ. ಕುರಿ ಮಾತನಾಡಿ, ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಪರಿಸರ ಉಳಿದರೆ ನಾವು ಉಳಿಯುತ್ತೇವೆ. ನಮ್ಮ ಸುತ್ತಲಿನ ಪರಿಸರವನ್ನು ಸುರಕ್ಷಿತವಾಗಿಟ್ಟುಕೊಳ್ಳುವುದರ ಜೊತೆಗೆ ಎಲ್ಲ ಕಡೆಗಳಲ್ಲಿಯೂ ಗಿಡಗಳನ್ನು ನೆಡುವ ಜಾಗೃತಿ ಮೂಡಬೇಕಿದೆ ಎಂದರು. ಈ ಸಂದರ್ಭದಲ್ಲಿ ಶಾಲೆಯ ಎಲ್ಲ ಸಿಬ್ಬಂದಿಗಳು ಉಪಸ್ಥಿತರಿದ್ದರು.

**ಎಸ್‌ಎವಿ ಬಾಲಿಕೆಯರ ಪ್ರೌಢಶಾಲೆಯಲ್ಲಿ:** ಪಟ್ಟಣದ ಎಸ್‌ಎವಿ ಬಾಲಿಕೆಯರ ಪ್ರೌಢಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. 50ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ಪರಿಸರದ ಸಂರಕ್ಷಣೆ ಕುರಿತಾದ ಸ್ರಜನಶೀಲ ಕಲಾ ಚಿತ್ರಗಳನ್ನು ರಚಿಸಿದರು. ಹಲವು ವಿದ್ಯಾರ್ಥಿನಿಯರು ಪರಿಸರ ಸಂರಕ್ಷಣೆ ಕುರಿತಾದ ಪ್ರಬಂಧಗಳನ್ನು ಮಂಡಿಸಿದರು. ಮುಖ್ಯೋಪಾಧ್ಯಾಯರಾದ ಎಸ್. ಎನ್. ಹೂಲಗೇರಿ ಮಾತನಾಡಿ, ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದ್ದು, ವಿಶೇಷವಾಗಿ ಮಕ್ಕಳು ಈ ಕುರಿತಾಗಿ ಅರಿವು ಹೊಂದುವುದರ ಜೊತೆಗೆ ಜನಸಾಮಾನ್ಯರಲ್ಲಿ ಪರಿಸರ ಸಂರಕ್ಷಣೆ ಕುರಿತಾಗಿ ಜಾಗೃತಿ ಮೂಡಿಸಬೇಕೆಂದು ತಿಳಿಸಿದರು.

ಶಾಲಾ ಆವರಣದಲ್ಲಿ ಸಸಿಗಳನ್ನು ನೆಡುವುದರ ಜೊತೆಗೆ ವಿವಿಧ ಸ್ಪರ್ಧೆಯಲ್ಲಿ ಭಾಗವಹಿಸಿದ ಮಕ್ಕಳಿಗೆ ಬಹುಮಾನಗಳನ್ನು ವಿತರಿಸಲಾಯಿತು. ಶಿಕ್ಷಕ ಬಿ.ಡಿ. ಯರಗೊಪ್ಪ ನಿರೂಪಿಸಿದರು. ಎಸ್.ಶಿವಮೂರ್ತಿ ಗುರುಗಳು ವಂದಿಸಿದರು. ಎಸ್.ಎಫ್. ಧರ್ಮಾಯತ ಹಾಗೂ ಆರ್.ಎಮ್. ಗುಳಬಾಳ ಗುರುಮಾತೆಯರು ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭ




■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನಲ್ಲಿ ಇತ್ತೀಚೆಗೆ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ 'ಪಯಣ-2025'ನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ವಿಭಾಗಾಧಿಕಾರಿ ಡಾ. ಈರಣ್ಣಾ ಕೋರಚಗಾಂವ ವಿದ್ಯಾರ್ಥಿಗಳಿಗೆ ಶುಭಾಶಯಗಳನ್ನು ತಿಳಿಸಿ ಮಾತನಾಡಿ, ಜ್ಞಾನ, ಶಿಸ್ತು ಮತ್ತು ಮೌಲ್ಯಗಳ ಶಕ್ತಿ ನಿಮ್ಮನ್ನು ಜೀವನ ಮಾರ್ಗದಲ್ಲಿ ಯಶಸ್ವಿಯಾಗಿಸುವುದು ಖಚಿತ ಎಂದರಲ್ಲದೆ, ವಿದ್ಯಾರ್ಥಿಗಳಿಗೆ ಶ್ರದ್ಧೆ, ನಿಷ್ಠೆ ಮತ್ತು ಸಮಾಜ ಸೇವೆಯ ಮಹತ್ವವನ್ನು ವಿವರಿಸಿದರು.

ವಿದ್ಯಾರ್ಥಿಗಳು ತಮ್ಮ ಕಾಲೇಜು ಜೀವನದ ಸವಿ ನೆನಪುಗಳನ್ನು ಹಂಚಿಕೊಂಡರು. ನಂತರ ಉಪನ್ಯಾಸಕರಾದ ಪ್ರೊ. ಸಂತೋಷಕುಮಾರ ಜಿ.ಎಂ, ಪ್ರೊ. ಜಗದೀಶ್ವರ ಶಿವನಗುತ್ತಿ, ಡಾ. ಮಲ್ಲಿಕಾರ್ಜುನ ಜಿ.ಡಿ ಮತ್ತು ಪ್ರೊ. ತೆಹಸೀನ್ ಶಿಗ್ಲಿ ತಮ್ಮ ಅನುಭವಗಳನ್ನು ಹಂಚಿಕೊಂಡರು.

ಮೂರನೆಯ ವರ್ಷದ ವಿದ್ಯಾರ್ಥಿಗಳ ತಂಡದವರು ಕಾರ್ಯಕ್ರಮ ನಿರ್ವಹಿಸಿದರು.




ಗದಗ ತಾಲೂಕಿನ ಲಕ್ಕುಂಡಿ ಗ್ರಾಮಕ್ಕೆ ವಿವಿಧ ಕಾಮಗಾರಿಗಳ ಶಿಲನ್ಯಾಸ ಕಾರ್ಯಕ್ರಮಕ್ಕೆ ಆಗಮಿಸಿದ್ದ ಸಿಎಂ ಸಿದ್ಧರಾಮಯ್ಯ ಅವರನ್ನು ಕಾಂಗ್ರೆಸ್ ಪಕ್ಷದ ಲಕ್ಕುಂಡಿ ಘಟಕದಿಂದ ಸನ್ಮಾನಿಸಲಾಯಿತು.

ಮುಖ್ಯಮಂತ್ರಿ ಅವರಿಗೆ ಕರಿ ಕಂಬಳಿ ಹೊದೆಸಿ, ಐತಿಹಾಸಿಕ ಲಕ್ಕುಂಡಿಯ ನನ್ನೇಶ್ವರ ದೇವಸ್ಥಾನದ ಚಿತ್ರವನ್ನು ಕಾಣಿಕೆ ನೀಡಲಾಯಿತು. ಈ ಸಂದರ್ಭದಲ್ಲಿ ಗ್ರಾ.ಪಂ. ಅಧ್ಯಕ್ಷ ಕೆ.ಎಸ್. ಪೂಜಾರ, ಪಕ್ಷದ ಹಿರಿಯ ಮುಖಂಡ ವೀರಯ್ಯ ಗಂಧದ, ಮಂಜುನಾಥ ಕಟ್ಟಿಗ್ಗಾರ, ಬಸವರಾಜ ಮೂಲಿಮನಿ, ಕರಿಯಪ್ಪ ರವಳೋಜಿ, ರಮೇಶ ಭಾವಿ, ನಿಂಗನಗೌಡ ರೋಣದ, ರಸೂಲಖಾನ ದೌವಲತ್ತರ, ಮರದಾನಲಿ ದೊಡ್ಡಮನಿ, ವಾಸೀಂ ಮಸೂತಿಮನಿ ಉಪಸ್ಥಿತರಿದ್ದರು.

### ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಚನ

# ಕಷ್ಟಗಳು ಸುಖಾಗಮನದ ಹೆಗ್ಗುರುತುಗಳು

■ವಿಜಯಸಾಕ್ಷಿ ಸುದ್ದಿ, ಬೇಲೂರು

ಮನುಷ್ಯ ಜೀವನದಲ್ಲಿ ಧರ್ಮ, ಅರ್ಥ, ಕಾಮ, ಮತ್ತು ಮೋಕ್ಷ ಎಂಬ ಚತುರ್ವಿಧ ಪುರುಷಾರ್ಥಗಳಲ್ಲಿ ಒಂದನ್ನಾದರೂ ಗಳಿಸಿಕೊಂಡು ಬಾಳಬೇಕು. ಜೀವನದಲ್ಲಿ ಬರುವ ಕಷ್ಟಗಳು ಸುಖಾಗಮನದ ಹೆಗ್ಗುರುತು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಕಾರ್ಜುವಳ್ಳಿ ಸಂಸ್ಥಾನ ಹಿರೇಮಠದಲ್ಲಿ 'ಮನೆ ಮನೆಗೆ ರೇಣುಕ-ಮನ ಮನಕೆ ರೇಣುಕ' ತತ್ವ ಪ್ರಚಾರ ಅಭಿಯಾನದ ರಜತ ಸಂಚಿಕೆ ಬಿಡುಗಡೆ, ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಜೀವನದ ಹೂದೋಟದಲ್ಲಿ ಅರಳುವ ಹೂಗಳೆಷ್ಟೋ, ಬಾಡುವ ಜೀವಗಳು ಎಷ್ಟೋ ಹೇಳಲಾಗದು. ಅವರವರು ಬದುಕಿನಲ್ಲಿ ಅಳವಡಿಸಿಕೊಂಡ ನೀತಿ-ನಿಯತ್ತುಗಳೇ ಕಾರಣ. ಭೌತಿಕ ಸಂಪನ್ಮೂಲಗಳಾಗಲಿ, ಸಿರಿ ಸಂಪತ್ತಿನ




ಸಂಗ್ರಹವಾಗಲಿ ಮಾನವನಿಗೆ ಸಮಾಧಾನ ತರಲಾರವು. ಇದರೊಂದಿಗೆ ಒಂದಿಷ್ಟಾದರೂ ಆಧ್ಯಾತ್ಮಿಕ ಹಸಿವು ಬೇಕು. ಇಂದು ಎಲ್ಲೆಡೆ ಶಾಂತಿಗಾಗಿ ಹುಡುಕಾಟ ನಡೆದಿದೆ. ಮಂತ್ರ, ತೀರ್ಥ, ಗುರು, ದೇವರು, ದೈವ ಮತ್ತು ವೈದ್ಯರಲ್ಲಿ ಯಾವ ಭಾವನೆಗಳನ್ನು ಇಟ್ಟು ನಡೆಯುತ್ತೇವೆಯೋ ಅದಕ್ಕೆ ತಕ್ಕ ಫಲಗಳನ್ನು ಮನುಷ್ಯ ಪಡೆಯುವುದರಲ್ಲಿ ಯಾವುದೇ ಅನುಮಾನವಿಲ್ಲ ಎಂದರು.

ಸಮಾರಂಭ ಉದ್ಘಾಟಿಸಿ ಮಾತನಾಡಿದ ಬಿ.ಜೆ.ಪಿ ಜಿಲ್ಲಾಧ್ಯಕ್ಷ ಸಿದ್ದೇಶ ನಾಗೇಂದ್ರ, ದಿನಕ್ಕೊಂದು ಬಣ್ಣ, ಕ್ಷಣಕ್ಕೊಂದು ಮಾತು ಬದಲಾಯಿಸಿ ಬದುಕುವವರಿಗೆ ಈ ಪ್ರಪಂಚದಲ್ಲಿ ಬೆಲೆ ಜಾಸ್ತಿ. ಧರ್ಮಕ್ಕೆ ಮನುಷ್ಯ ತಲೆ ಬಾಗಬೇಕೇ ಹೊರತು ದುಷ್ಟರಿಗಲ್ಲ. ಮಾನವೀಯತೆಗೆ ತಲೆ ಬಾಗಬೇಕೇ ಹೊರತು ಅವಿವೇಕಿಗಳಿಗಲ್ಲ. ಕಾರ್ಜುವಳ್ಳಿ ಸದಾಶಿವ ಶ್ರೀಗಳು ಬಹಳಷ್ಟು ಪರಿಶ್ರಮ ವಹಿಸಿ ಶ್ರೀ ಮಠದ ಅಭಿವೃದ್ಧಿ ಮಾಡುತ್ತಿರುವುದು ಭಕ್ತ ಸಮುದಾಯಕ್ಕೆ ಸಂತೋಷ ಉಂಟು ಮಾಡಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಜೀವನದಲ್ಲಿ ಅನುಭವಗಳು ಕಲಿಸುವಷ್ಟು ಪಾಠಗಳನ್ನು ಯಾವುದೇ ವಿಶ್ವ ವಿದ್ಯಾಲಯಗಳು ಕಲಿಸಲಾರವು. ಕಾರ್ಜುವಳ್ಳಿ ಶ್ರೀಗಳವರು ಅಲ್ಪ ಸಮಯದಲ್ಲಿ ಅದ್ಭುತ ಕಾರ್ಯ ಮಾಡುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಕಡೇನಂದಿಹಳ್ಳಿ ರೇವಣಸಿದ್ಧೇಶ್ವರ ಶ್ರೀಗಳು, ಸಂಗೊಳ್ಳಿ ಗುರುಲಿಂಗ ಶ್ರೀಗಳು, ಹಾರನಹಳ್ಳಿ ಶಿವಯೋಗಿ ಶ್ರೀಗಳು, ಸಂಕಲಾಪುರದ ಧರ್ಮರಾಜೇಂದ್ರ ಶ್ರೀಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಎಸ್.ಎಸ್. ಶಿವಮೂರ್ತಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಿ.ಎ. ದೇವರಾಜ ಶಾಸ್ತ್ರಿಗಳು ನುಡಿ ನಮನ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಶ್ರೀ ಮಠದ ಅಂಚೆ ಚೀಟಿ ಬಿಡುಗಡೆಗೊಳಿಸಲಾಯಿತು.

ಮುಖ್ಯ ಅತಿಥಿಗಳಾಗಿ ಕೆ.ಎಸ್. ಮಂಜೇಗೌಡ, ಮುರುಳಿ ಮೋಹನ್, ಮಹೇಶ್ ಎಂ.ಎಸ್., ಬಿ.ರೇಣುಕಪ್ರಸಾದ್, ಡಿ.ಎಸ್. ಜಯಣ್ಣ, ಡಾ. ಎಂ.ಈ. ಜಯರಾಜ್, ವೈ.ಬಿ. ಟೀಕರಾಜ್, ಪುನೀತ ಬನ್ನಹಳ್ಳಿ, ಅಜಿತ್ ಚಿಕ್ಕಣಗಾಲ್, ಶಾಂತಪ್ಪ ದೇವರಮನೆ, ಕೆ.ಶಾಂತರಾಜ್ ಕೆರೆಹಳ್ಳಿ, ಎಂ.ಜೆ. ಬಸವಣ್ಣ, ಸಿ.ಎಸ್. ಮಹೇಶ್ ಚಿಕ್ಕೋಟೆ, ಕಟ್ಟೆಗದ್ದೆ ನಾಗರಾಜು, ವಿನೋದಕುಮಾರ್ ಮರಸು, ಧರಣೇಂದ್ರ ಹೆಚ್.ಎಂ ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ವನದುರ್ಗಾ ಪರಮೇಶ್ವರಿ ಮಹಿಳಾ ಮಂಡಳಿಯಿಂದ ಪ್ರಾರ್ಥನೆ, ಪೂಜಾ ಯಶವಂತ ಇವರಿಂದ ಸ್ವಾಗತ ಜರುಗಿತು. ಪೂರ್ಣಿಮಾ ಎಸ್.ಎಸ್ ಮತ್ತು ಉಮೇಶ ಎಂ.ಬಿ. ಮುರುಡೂರು ನಿರೂಪಿಸಿದರು.

ನೇತೃತ್ವ ವಹಿಸಿದ್ದ ಕಾರ್ಜುವಳ್ಳಿ ಹಿರೇಮಠದ ಸದಾಶಿವ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಏನು ಹೇಳಬೇಕು ಎನ್ನುವುದು ಜ್ಞಾನ, ಹೇಗೆ ಹೇಳಬೇಕೆನ್ನುವುದು ವ್ಯಕ್ತಿತ್ವ, ಎಷ್ಟು ಹೇಳಬೇಕು ಎನ್ನುವುದು ಕೌಶಲ್ಯ. ಹೇಳಬೇಕೋ ಬೇಡವೋ ಎಂಬುದು ವಿವೇಕ. ಅಶಾಂತಿಯಿಂದ ಬಳಲುವ ಜನತೆಗೆ ಅಧ್ಯಾತ್ಮದ ಜ್ಞಾನದ ಅರಿವು ಮೂಡಿಸುವುದೇ ಸಮಾರಂಭದ ಮೂಲ ಉದ್ದೇಶವಾಗಿದೆ. ಭಕ್ತರ ಸಹಕಾರ-ಜಗದ್ಗುರುಗಳವರ ಆಶೀರ್ವಾದ ಬಲದಿಂದ ಶ್ರೀ ಮಠದ ಪರಿಸರದಲ್ಲಿ ಅನೇಕ ಅಭಿವೃದ್ಧಿ ಕಾರ್ಯಗಳು ನಡೆಯುತ್ತಿರುವುದು ತಮಗೆ ಸಂತೃಪ್ತಿ ತಂದಿದೆ ಎಂದರು.

# ಹಸಿರು ಪರಿಸರ ನಿರ್ಮಾಣಕ್ಕೆ ಮುಂದಾಗಿ

▶▶ಮೊದಲನೇ ಪುಟದಿಂದ

ಗ್ರಾಮದಲ್ಲಿ ಮುಕ್ತ ಮಾಡಲು ಎಲ್ಲರ ಸಹಕಾರ ನೀಡಬೇಕೆಂದರು. ಸ್ವಚ್ಛ ಭಾರತ ಮಿಷನ್ ಗ್ರಾಮೀಣ ಯೋಜನೆ ಅಡಿಯಲ್ಲಿ ಪ್ರಸ್ತಕ ಸಾಲಿನಲ್ಲಿ ಸರಕಾರವು ಜಾಗತಿಕವಾಗಿ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವ ನಿಟ್ಟಿನಲ್ಲಿ ವಿಶೇಷ ಅಂದೋಲನವನ್ನು ಹಮ್ಮಿಕೊಂಡಿದೆ ಎಂದರು.

ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಸಂಚಾಲಕಿ ಬಿ.ಕೆ. ಸರೋಜಕ್ಕ ಅವರು ಮಾತನಾಡಿ, ಪರಮಾತ್ಮನ ಜ್ಞಾನವನ್ನು ಅಳವಡಿಸಿಕೊಳ್ಳುವುದ ಮೂಲಕ ಪರಿಸರದ ರಕ್ಷಣೆ ಪ್ರತಿಯೊಬ್ಬರ ಕರ್ತವ್ಯವಾಗಿರುತ್ತದೆ.

ಎಲ್ಲಿ ಪರಿಸರ ಧನಾತ್ಮಕವಾಗಿರುತ್ತದೆಯೋ, ಅಲ್ಲಿ ಪರಮಾತ್ಮ ನೆಲೆಸಿರುತ್ತಾನೆ ಎಂದರು. ಪಿ.ಡಿ.ಓ ಅಮೀರ ನಾಯಕ ಪ್ರಾಸ್ತಾವಿಕವಾಗಿ ಮಾತನಾಡಿದರು.

ಗ್ರಾ. ಪಂ ಸರ್ವ ಸದಸ್ಯರು, ಜಿಲ್ಲಾ ಎಸ್.ಸಿ-ಎಸ್ಟಿ ದೌರ್ಜನ್ಯ ನಿಯಂತ್ರಣ ಸಮಿತಿಯ ಸದಸ್ಯ ಬಸವರಾಜ ಮುಳ್ಳಾಳ, ಭಾರತೀಯ ಕಿಸಾನ ಸಂಘದ ತಾಲೂಕು ಘಟಕದ ಅಧ್ಯಕ್ಷ ವೆಂಕಟೇಶ ದೊಂಗಡೆ, ಗ್ರಾಮ ಪಂಚಾಯಿತಿ ಮಟ್ಟದ ಮಹಿಳಾ ಸಂಜೀವಿನಿ ಒಕ್ಕೂಟದ ಅಧ್ಯಕ್ಷೆ ಕಸ್ತೂರೆವ್ವ ಗುಂಜಳ, ಚಂದ್ರಕಲಾ ಮಾಡಲಗೇರಿ, ಶೈಲಾ ಅಂಬಕ್ಕಿ, ಆಶಾ, ಅಂಗನವಾಡಿ, ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಹಾಜರಿದ್ದರು. ಗ್ರಾ.ಪಂ ಕಾರ್ಯದರ್ಶಿ ಪ್ರದೀಪ ಆಲೂರ ಸ್ವಾಗತಿಸಿದರು. ಎಂ.ಎ. ಗಾಜಿ ವಂದಿಸಿದರು.

# ಸಹಾಯಧನ ಸೌಲಭ್ಯಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನಲ್ಲಿ ಇಲಾಖೆಯಿಂದ ವಿವಿಧ ಯೋಜನೆಗಳಡಿ ಸಹಾಯಧನ ಸೌಲಭ್ಯ ಪಡೆಯಲು ತಾಲೂಕಿನ ತೋಟಗಾರಿಕೆ ಬೆಳೆಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಹೊಸ ಪ್ರದೇಶ ವಿಸ್ತರಣೆ ಕಾರ್ಯಕ್ರಮದಡಿ ಪ್ರಮುಖವಾಗಿ ಬಾಳೆ, ಮಾವು, ದ್ರಾಕ್ಷಿ, ಪಪ್ಪಾಯಿ, ದಾಳಿಂಬೆ, ಲಿಂಬೆ, ಪೇರಲ, ಗೋಡಂಬಿ ಹಾಗೂ ಹೈಬ್ರೀಡ್ ತರಕಾರಿ, ಹೂ ಬೆಳೆ, ಔಷಧ ಮತ್ತು ಸುಗಂಧ ದ್ರವ್ಯ ಪ್ರದೇಶ ವಿಸ್ತರಣೆ, ಮಾವು ಪುನಶ್ಚೇತನ, ಪ್ಲಾಸ್ಟಿಕ್ ಮಲ್ಚಿಂಗ್, ವೈಯಕ್ತಿಕ ನೀರು ಸಂಗ್ರಹಣಾ ಘಟಕ ನಿರ್ಮಾಣ, ಉಳ್ಳಾಗಡ್ಡಿ ಶೇಖರಣಾ ಘಟಕ, ಫಾರ್ಮ್ ಗೇಟ್, ಯಾಂತ್ರೀಕರಣ, ಜೇನು ಸಾಕಾಣಿಕೆ, ಹನಿ ನೀರಾವರಿ ಅಳವಡಿಸಿಕೊಳ್ಳಲು ಸಹಾಯಧನ ಹಾಗೂ ತಾಳೆ ಬೆಳೆ ಯೋಜನೆಯಡಿ ಪ್ರದೇಶ ವಿಸ್ತರಣೆಗೆ ಸಹಾಯಧನ ಸೇರಿ ವಿವಿಧ ಸೌಲಭ್ಯ ಪಡೆಯಲು ಆಸಕ್ತ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಅಥವಾ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಗದಗ ರವರ ಕಚೇರಿಗೆ ಬೇಟಿ ನೀಡಿ ಸಂಪರ್ಕಿಸಿ ಜೂನ್ 30 ರ ಒಳಗಾಗಿ ಅರ್ಜಿ ಸಲ್ಲಿಸಬೇಕೆಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿ.ಆರ್ ಕೊಪ್ಪದರಿಗೆ ಬೀಳ್ಕೊಡುಗೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವಿದ್ಯಾವರ್ಧಕ ಸಂಸ್ಥೆಯ ಸಿ.ಎಸ್. ಪಾಟೀಲ ಬಾಲಕಿಯರ ಪ್ರೌಢಶಾಲೆಯಲ್ಲಿ 39 ವರ್ಷ ಸೇವೆ ಸಲ್ಲಿಸಿ ನಿವೃತ್ತರಾದ ಬಿ.ಆರ್. ಕೊಪ್ಪದ ಅವರಿಗೆ ಸಂಸ್ಥೆ ತ್ರಿವಳಿ ಶಾಲೆಗಳಿಂದ ಸನ್ಮಾನ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಗೌರವ ಕಾರ್ಯದರ್ಶಿ ವೀರನಗೌಡ ಪಾಟೀಲ ಮಾತನಾಡಿ, ಒಂದು ಸಂಸ್ಥೆ ನಡೆಯಲು ಉತ್ತಮ ಶಿಕ್ಷಕ-ಸಿಬ್ಬಂದಿಯೊಂದಿಗೆ ಉತ್ತಮ ಶಿಕ್ಷಕೇತರ ಸಿಬ್ಬಂದಿಯೂ ಅಷ್ಟೇ ಮುಖ್ಯವಾಗಿ ಬೇಕಾಗುತ್ತದೆ. ಎಲ್ಲರೂ ಉತ್ತಮ ಕೆಲಸಗಾರರಾದರೆ ಸಂಸ್ಥೆಯು ಚೆನ್ನಾಗಿ ಮುಂದುವರೆಯಲು ಸಾಧ್ಯವಾಗುತ್ತದೆ. ಬಿ.ಆರ್. ಕೊಪ್ಪದರು ತಮ್ಮ 39 ವರ್ಷದ ಸುದೀರ್ಘ ಅವಧಿಯಲ್ಲಿ ಸಾರ್ಥಕ ಸೇವೆ ಸಲ್ಲಿಸಿದ್ದಾರೆ ಎಂದರು.

ಅತಿಥಿಗಳಾಗಿ ಪಾಲ್ಗೊಂಡಿದ್ದ ಆಡಳಿತ ಮಂಡಳಿ ಸದಸ್ಯರಾದ ಎಂ.ಎಸ್. ಮಲ್ಲಾಪೂರ ಮಾತನಾಡಿ, ಭರಮಪ್ಪ ಕೊಪ್ಪದರವರು ನಿವೃತ್ತಿಯ ನಂತರವೂ ಅವಶ್ಯವಿದ್ದಾಗ ಬಂದು ಶಾಲೆಯ ಜವಾಬ್ದಾರಿಯನ್ನು ನಿಭಾಯಿಸಲಿ ಎಂದರು. ಪ್ರಾಥಮಿಕ ಶಾಲೆಯ ನಿವೃತ್ತ ಶಿಕ್ಷಕ ಬಿ.ವಿ. ಹೊರಪೇಟಿ ಮಾತನಾಡಿ, ನಾವು ಶಿಕ್ಷಕರಾದರೂ ಕೊಪ್ಪದರೊಂದಿಗೆ ಸ್ನೇಹಿತನಂತೆ ನಡೆದುಕೊಂಡಿದ್ದೇವೆ. ಅವರು ಒಬ್ಬ ಒಳ್ಳೆಯ ಸ್ನೇಹಜೀವಿಯಂತೆ ಕಾರ್ಯನಿರ್ವಹಿಸಿದ್ದಾರೆ ಎಂದರು.

ಸನ್ಮಾನ ಸ್ವೀಕರಿಸಿದ ಕೊಪ್ಪದ ಮಾತನಾಡಿ, ನಾನು, ಸಂಸ್ಥಾಪಕರಾದ ಸಿ.ಎಸ್. ಪಾಟೀಲರ ಕೃಪೆಯಿಂದ ಇಲ್ಲಿ ನೌಕರಿ ದೊರಕಿಸಿಕೊಂಡು ಸೇವೆಗೈದಿದ್ದೇನೆ. ಅವರ ಋಣ, ಸಂಸ್ಥೆಯ ಋಣ ನನ್ನ ಮೇಲಿದೆ ಎಂದರು. ಮುಖ್ಯಾಧ್ಯಾಪಕ ಎಸ್.ಜಿ. ಕೋಲ್ಮಿ, ವಾಯ್.ವಾಯ್. ಉಣಕಲ್ ಮಾತನಾಡಿದರು. ಪ್ರಾಥಮಿಕ ಶಾಲೆಯ ಮುಖ್ಯಾಧ್ಯಾಪಕ ಡಾ. ರಾಮಚಂದ್ರ ಹಂಸನೂರ ಹಾಗೂ ಬಾಲಕರ ಪ್ರೌಢಶಾಲೆ ಮುಖ್ಯಾಧ್ಯಾಪಕ ಎಮ್.ಆರ್. ನಾಯಿಕ, ಎನ್. ಎಸ್. ಹಂಜಗಿ ವೇದಿಕೆಯಲ್ಲಿದ್ದರು. ಕೆ.ಆಯ್. ಪಾಟೀಲ ಸ್ವಾಗತಿಸಿದರೆ, ಆಯ್.ಎಸ್. ಗೌಡರ ಕಾರ್ಯಕ್ರಮ ನಿರೂಪಿಸಿದರು. ಬಿ.ಎಸ್. ಹೊನಗುಡಿ ವಂದಿಸಿದರು.

# ಶಿಕ್ಷಣದಿಂದ ಅಭಿವೃದ್ಧಿ ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ




ದೇಶ ಅಭಿವೃದ್ಧಿಯಾಗುವುದು ಗುಡಿ ಗುಂಡಾರಗಳ ನಿರ್ಮಾಣದಿಂದಲ್ಲ. ಎಲ್ಲಾ ವರ್ಗದ ಮಕ್ಕಳಿಗೆ ಶಿಕ್ಷಣ ನೀಡುವುದರಿಂದ ಅಭಿವೃದ್ಧಿ ಸಾಧ್ಯವೆಂದು ನಿವೃತ್ತ ಪ್ರಾಧ್ಯಾಪಕ ಎಸ್.ಶಿವಾನಂದ ಹೇಳಿದರು.

ಪಟ್ಟಣದ ಅಂಬ್ಲಿ ದೊಡ್ಡ ಭರಮಪ್ಪ ಪ್ರಥಮದರ್ಜೆ ಮಹಾವಿದ್ಯಾಲಯದಲ್ಲಿ ಶುಕ್ರವಾರ ನಡೆದ ಪ್ರತಿಭಾ ದಿನಾಚರಣೆ ಹಾಗೂ ವಿವಿಧ ಸಾಂಸ್ಕೃತಿಕ ಸಂಘಗಳ ಸಮಾರೋಪ ಸಮಾರಂಭದ ಉಧ್ಘಾಟನೆ ನೆರವೇರಿಸಿ ಮಾತನಾಡಿದರು. ಯುವಕರು ದೇಶದ ಸಾಮರ್ಥ್ಯವನ್ನು ನಿಭಾಯಿಸುವ ಶಕ್ತಿಯನ್ನು ಹೊಂದಿದವರಾಗಿದ್ದಾರೆ. ಜೀವನವೇ ಒಂದು ಸಂಭ್ರಮಾಚರಣೆ. ಅದನ್ನು ಸಂತೋಷದಿಂದ ಅನುಭವಿಸಬೇಕು. ವಿದ್ಯಾರ್ಥಿಗಳಲ್ಲಿ ವ್ಯಕ್ತಿತ್ವ ವಿಕಸನವಾಗಲು ಉತ್ತಮವಾಗಿ ಆಲಿಸುವ ಸಮರ್ಥ್ಯವನ್ನು ಹೊಂದಿರಬೇಕು. ಹಾಗಾದಲ್ಲಿ ಮಾತ್ರ ವಿಕಸನ ವಿಂಗಡನೆಯಾಗಲು ಸಾಧ್ಯವೆಂದರು. ನಿಜವಾದ ಧರ್ಮವೆಂದರೆ ಜಾತಿ-ಜಾತಿಗಳ ನಡುವೆ ವಿಷಬೀಜ ಬಿತ್ತುವುದಲ್ಲ.

ಬದಲಿಗೆ ಎಲ್ಲಾ ಜೀವ ಸಂಕುಲಗಳ ಮೇಲೆ ದಯೆ, ಕರುಣೆ ಹೊಂದಿರುವುದಾಗಿದೆ. ಪ್ರತಿ ವಸ್ತುವಿಗೆ ಅದರದೇ ಆದ ಮಹತ್ವ ಮತ್ತು ಸ್ವಭಾವಗಳಿದ್ದು, ಅದನ್ನು ನಾವು ಗೌರವಿಸಬೇಕು ಎಂದರು.

ಕಾಲೇಜು ಆಡಳಿತ ಮಂಡಳಿಯ ಅಧ್ಯಕ್ಷ ಕೆ. ಕೊಟ್ರೇಶಪ್ಪ ಹಾಗೂ ಮಾಜಿ ಅಧ್ಯಕ್ಷ ಕೋರಿ ವಿರೂಪಾಕ್ಷಪ್ಪ ಮಾತನಾಡಿದರು.

ಪ್ರಾಚಾರ್ಯ ಎಸ್.ಎಂ. ಸಿದ್ದಲಿಂಗಮೂರ್ತಿ, ಎಸ್‌ಎಸ್‌ಎಚ್ ಜೈನ್ ಕಾಲೇಜು ಪ್ರಾಚಾರ್ಯ ಕೆ.ಎಂ. ವಿಶ್ವನಾಥ, ಪ್ರಮುಖರಾದ ಆರುಂಡಿ ನಾಗರಾಜ, ಪುಷ್ಪಾ ದಿವಾಕರ್, ವಿದ್ಯಾರ್ಥಿ ಪ್ರತಿನಿಧಿಗಳಾದ ಲೂಬ್ನಾ ಅಕ್ತರ್, ಹೆಚ್.ವಿ. ಕೃತಿಕಾ, ಪ್ರಮೋದ ಎಸ್ ಹಾಗೂ ಇತರರಿದ್ದರು.

# ರೋಗಗಳನ್ನು ಆಹ್ವಾನಿಸುತ್ತಿದೆ ಶುದ್ಧ ನೀರಿನ ಘಟಕ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣ ಪಂಚಾಯಿತಿಯ ವಾರ್ಡ್ ನಂ.3ರಲ್ಲಿನ ಶುದ್ಧ ನೀರಿನ ಘಟಕದ ಆವರಣ ರೋಗ-ರುಜಿನಗಳಿಗೆ ಆಹ್ವಾನ ನೀಡುತ್ತಿದ್ದು, ಸಾರ್ವಜನಿಕರು ಶುದ್ಧ ನೀರಿನ ಜೊತೆಯಲ್ಲಿ ರೋಗವನ್ನು ಸಹ ಉಚಿತವಾಗಿ ಪಡೆದುಕೊಳ್ಳುವ ಸ್ಥಿತಿ ನಿರ್ಮಾಣವಾಗಿದೆ.

ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಲಕ್ಷಾಂತರ ರೂ ವೆಚ್ಚದಲ್ಲಿ ಶುದ್ಧ ನೀರಿನ ಘಟಕ ನಿರ್ಮಿಸಲಾಗಿದ್ದು, ಸದರಿ ಘಟಕದಲ್ಲಿ ಪ್ಲೋರೈಡ್ ಯುಕ್ತ ನೀರು ಸೋರಿಕೆಯಿಂದ ಕೊಳಚೆಯ ಸ್ಥಿತಿ ನಿರ್ಮಾಣವಾಗಿದೆ. ಮಳೆಗಾಲ ಬಂತೆಂದರೆ ಸಾಂಕ್ರಾಮಿಕ ಕಾಯಿಲೆಗಳು ಹರಡುವದು ಸಹಜ. ಇಂತಹ ಸಂದರ್ಭದಲ್ಲಿ ಶುದ್ಧ ನೀರಿನ ಘಟಕದ ಆವರಣದಲ್ಲಿ ನಿತ್ಯ ನೀರು ನಿಂತು ಸೊಳ್ಳೆಗಳ ಉತ್ಪತ್ತಿ ಹೆಚ್ಚುತ್ತಿದೆ. ಈ ಘಟಕದ ಅಕ್ಕ ಪಕ್ಕದಲ್ಲಿ ಬಸ್ ನಿಲ್ದಾಣ, ಇಂದಿರಾ ಕ್ಯಾಂಟೀನ್, ಕಂದಾಯ ಇಲಾಖೆ ಕಛೇರಿ, ಪ.ಪಂ, ಸಹಾಯಕ ಕೃಷಿ ಇಲಾಖೆ, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇದ್ದು, ಸದಾ



ಜನಸಂದಣಿಯಿಂದ ಕೂಡಿರುತ್ತದೆ.

ಮುಳಗುಂದ ಪಟ್ಟಣವೇನೋ ಸ್ವಚ್ಛತೆಗಾಗಿ ರಾಜ್ಯ ಹಾಗೂ ಕೇಂದ್ರ ಸರಕಾರದಿಂದ ಪ್ರಶಸ್ತಿ ಪಡೆದುಕೊಂಡಿದೆ.

ಆದರೆ ಈ ಪ್ರಶಸ್ತಿಗಳು ಕೇವಲ ದಾಖಲೆಗಳಿಗೆ ಮಾತ್ರ ಸಿಮಿತವಾಗಿದ್ದು, ಪ.ಪಂ ಅಧಿಕಾರಿಗಳಿಗೆ ಶುದ್ಧ ನೀರಿನ ಘಟಕದ ಆವರಣದಲ್ಲಿನ ಕಲುಷಿತ ನೀರಿನ ಬಗ್ಗೆ ಸಾಕಷ್ಟು ಬಾರಿ ಮನವಿ ಮಾಡಿದರೂ ಪ್ರಯೋಜನವಾಗುತ್ತಿಲ್ಲ ಎಂಬುದು ಸಾರ್ವಜನಿಕರ ಅಳಲು.

ಈ ಬಗ್ಗೆ ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೇದ ಪ್ರತಿಕ್ರಿಯಿಸಿ, ಪೈಪ್‌ಲೈನ್ ಸೋರಿಕೆಯಿಂದ ನೀರು ನಿಲ್ಲುತ್ತಿದ್ದು, ಕೂಡಲೇ ಪೈಪ್‌ಲೈನ್ ಸರಿಪಡಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುತ್ತೇವೆ ಎಂದಿದ್ದಾರೆ.

## ರಸ್ತೆ ಅಪಘಾತದಲ್ಲಿ ವ್ಯಕ್ತಿ ಸಾವು ಪ್ರಕರಣ: ವಾರಸುದಾರರ ಪತ್ತೆಗೆ ಮುಂದಾದ ಪೊಲೀಸರು!

■ವಿಜಯಸಾಕ್ಷಿ ಸುದ್ದಿ, ಗದಗ

ರಸ್ತೆ ಅಪಘಾತದಲ್ಲಿ ಮೃತಪಟ್ಟ ಅಪರಿಚಿತ ವ್ಯಕ್ತಿಯೊಬ್ಬನ ವಾರಸುದಾರ ಪತ್ತೆಗೆ ಗದಗ ಗ್ರಾಮೀಣ ಪೊಲೀಸರು ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳಿಗೆ ಪ್ರಕಟಣೆ ಹೊರಡಿಸಿದ್ದು, ಮೃತಪಟ್ಟ ವ್ಯಕ್ತಿಯ ಸಂಬಂಧಿಕರು ಅಥವಾ ವಾರಸುದಾರರು ಗೊತ್ತಾದರೆ ಗ್ರಾಮೀಣ ಪೊಲೀಸ್ ಠಾಣೆ ಗದಗ. ದೂರವಾಣಿ ಸಂಖ್ಯೆ:08372-278213, ಮೊಬೈಲ್ ನಂ. 9480804431 ಅಥವಾ ಗದಗ ಕಂಟ್ರೋಲ್ ರೂಂ-08372-238300 ಹಾಗೂ ಮೊಬೈಲ್ ನಂ.9480804400 ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2024ರ ಡಿಸೆಂಬರ್ 18ರಂದು ಬೆಳಗಿನ ಜಾವ ಗದಗ-ಕೊಪ್ಪಳ ರಾಷ್ಟ್ರೀಯ ಹೆದ್ದಾರಿಯ ಹರ್ಲಾಪೂರ ಕ್ರಾಸ್ ಬಳಿ ಕಾವೇರಿ ಹೋಟೆಲ್ ಎದುರಿಗೆ ರಸ್ತೆಯಲ್ಲಿ ನಡೆದುಕೊಂಡು ಹೊರಟಿದ್ದ ವ್ಯಕ್ತಿಯೊಬ್ಬನಿಗೆ (ಮಾನಸಿಕ ಅಸ್ವಸ್ಥ) ಗದಗನಿಂದ ಕೊಪ್ಪಳ ಕಡೆ ವೇಗವಾಗಿ ಹೊರಟಿದ್ದ ಅಪರಿಚಿತ ವಾಹನವೊಂದು ಡಿಕ್ಕಿ ಹೊಡೆದ ಪರಿಣಾಮವಾಗಿ ಆತ ಸ್ಥಳದಲ್ಲೇ ಮೃತಪಟ್ಟಿದ್ದ. ಆ ಕುರಿತು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ವಾಹನ ಸಮೇತ ಪರಾರಿಯಾಗಿದ್ದ ಚಾಲಕನ ವಿರುದ್ಧ ಗುನ್ನಾ ನಂ.257/2024ರಂತೆ ಪ್ರಕರಣ ದಾಖಲಾಗಿತ್ತು.




ದನಗಾಹಿಗಳ ನಡುವಿನ ಘರ್ಷಣೆಯಲ್ಲಿ ನೂರಾರು ಜನ ಸಾವನ್ನಪ್ಪಿದ್ದು, ಗಲಭೆ ನಡೆದ ಪ್ರದೇಶಗಳಲ್ಲಿ ದಕ್ಷಿಣ ಸುಡಾನ್ ಅಧ್ಯಕ್ಷ ಸಾಲ್ವಾ ಕಿರ್ ಗುರುವಾರ ತುರ್ತು ಪರಿಸ್ಥಿತಿ ಘೋಷಿಸಿದ್ದಾರೆ ಎಂದು ಸರ್ಕಾರಿ ಟಿವಿ ತಿಳಿಸಿದೆ.

# ಪರಿಸರ ಸಂರಕ್ಷಣೆಯ ಸಂಕಲ್ಪವಾಗಲಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆ ಎಂಬುದು ಕೇವಲ ಒಂದು ದಿನದ ಘೋಷಣೆ-ಆಚರಣೆಯಾಗಬಾರದು. ನಾಳಿನ ಸುಂದರ ಭವಿಷ್ಯಕ್ಕಾಗಿ ಪರಿಸರ ನಿತ್ಯ ನೂತನವಾಗುವಂತೆ ಮಾಡುವ ಹೊಣೆ ಎಲ್ಲರದ್ದಾಗಿದೆ ಬಿಸಿಎನ್ ಸಮೂಹ ವಿದ್ಯಾ ಸಂಸ್ಥೆಯ ನಿರ್ದೇಶಕ ಲೋಹಿತ್ ನೆಲವಿಗಿ ಹೇಳಿದರು.

ಅವರು ಗುರುವಾರ ಬಿಸಿಎನ್ ವಿಷನ್ ಪಿಯು ಮತ್ತು ಡಿಗ್ರಿ ಕಾಲೇಜಿನ ಆವರಣದಲ್ಲಿ ಪರಿಸರ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿಗಳಿಗೆ ಸಸಿಗಳನ್ನು ವಿತರಿಸಿ ಮಾತನಾಡಿ, ನಮ್ಮ ಸುತ್ತಲಿನ ಪ್ರಕೃತಿ, ಪರಿಸರ ಸಂರಕ್ಷಣೆ ಮಾಡುವದರೊಂದಿಗೆ ಪರಿಸರ ಬೆಳೆಸಿ ಸಂರಕ್ಷಿಸುವಲ್ಲಿ ವಿದ್ಯಾರ್ಥಿಗಳು, ಯುವಕರಿಂದ ಸ್ವಯಂ ಪ್ರೇರಿತ ಕಾರ್ಯವಾಗಬೇಕು. ಈ ನಿಟ್ಟಿನಲ್ಲಿ ಸಂಕಲ್ಪ ನಡೆಯಬೇಕಾಗಿದೆ ಎಂದರು.

ಪ್ರಾಚಾರ್ಯ ಮಂಜುನಾಥ ಬಂಡಿವಾಡ, ಉಪನ್ಯಾಸಕರಾದ ನಾಗರತ್ನ ಸಿ, ಬಸವರಾಜ್ ಶೆಟ್ಟರ, ಪ್ರಸನ್ನ ಕೆ, ರಮೇಶ್ ಗಿಣಿ, ರಾಜಶೇಖರ ಸ್ವಾಮಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಸಾಲ ಸೌಲಭ್ಯ ಒದಗಿಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ವರ್ಗಗಳ ಪ್ರವರ್ಗ-3ನಲ್ಲಿ ಬರುವ ಒಕ್ಕಲಿಗ ಸಮುದಾಯಗಳಿಗೆ ಸೇರಿದ ಕ್ರಮ ಸಂಖ್ಯೆ 1 ರ ( ಎ) ಯಿಂದ ( ಟಿ ) ವರೆಗೆ ನಮೂದಾಗಿರುವ ಒಕ್ಕಲಿಗ, ವಕ್ಕಲಿಗ, ಸರ್ಪ ಒಕ್ಕಲಿಗ, ಹಳ್ಳಿಕಾರ ಒಕ್ಕಲಿಗ, ನಾಮಧಾರಿ ಒಕ್ಕಲಿಗ, ಗಂಗಡ್‌ಕಾರ ಒಕ್ಕಲಿಗ, ದಾಸ್ ಒಕ್ಕಲಿಗ, ರೆಡ್ಡಿ ಒಕ್ಕಲಿಗ, ಮರಸು ಒಕ್ಕಲಿಗ ಗೌಡ, ಗೌಡ, ಹಳ್ಳಿಕಾರ್ , ಕುಂಚಿಟಿಗ, ಗೌಡ, ಕಾಪು, ಹೆಗಡೆ, ಕಮ್ಮ, ರಡ್ಡಿ , ಗೌಂಡರ್, ನಾಮಧಾರಿ ಗೌಡ, ಉಪ್ಪಿನ ಕೊಳಗ/ ಉತ್ತಮ ಕೊಳಗ ಸಮುದಾಯಕ್ಕೆ ಸೇರಿದ ಜನರ ಅಭಿವೃದ್ಧಿಗಾಗಿ 2025-26 ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಾದ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ ( ಬ್ಯಾಂಕುಗಳ ಸಹಯೋಗದೊಂದಿಗೆ), ಶೈಕ್ಷಣಿಕ ಸಾಲ ಯೋಜನೆ, ಶೈಕ್ಷಣಿಕ ಸಾಲ ಯೋಜನೆ, ವಿದೇಶ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ, ಸ್ವಾತಂತ್ರ್ಯ ಮಹೋತ್ಸವದ ಅಮೃತ ಮುನ್ನಡೆ ಯೋಜನೆಯ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ ಈ ಯೋಜನೆಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 2 ಕೊನೆಯ ದಿನವಾಗಿದೆ .

ಯೋಜನೆಗಳ ಸೌಲಭ್ಯ ಪಡೆಯಬಯಸುವ ಒಕ್ಕಲಿಗ ಸಮುದಾಯದ ಅರ್ಜಿದಾರರು ಸೇವಾ ಸಿಂಧು ಪೋರ್ಟಲ್ ಗ್ರಾಮ ಒನ್ /ಬೆಂಗಳೂರು ಒನ್ / ಕರ್ನಾಟಕ ಒನ್ ಗಳ ಅನ್ ಲೈನ್ ನಲ್ಲಿ ಮತ್ತು ಸ್ವಾತಂತ್ರ್ಯ ಅಮೃತ ಮುನ್ನಡೆ ಯೋಜನೆಗೆ ಅರ್ಜಿಯನ್ನು ಕೌಶಲ್ಯ ಕನಾಟಕ ಅಭಿವೃದ್ಧಿ ನಿಗಮದ ತಂತ್ರಾಂಶದ https://www.kaushalkar.com ಅಥವಾ ನಿಗಮದ ದೂರವಾಣಿ ಸಂಖ್ಯೆ 080-29904350, 29904268 ಅನ್ನು ಸಂಪರ್ಕಿಸಬೇಕು ಅಥವಾ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕಚೇರಿ ಸಂಖ್ಯೆ : 08372-232327 ಸಂಪರ್ಕಿಸಬಹುದಾಗಿದೆ.

### ಗ್ರಾಮ ದೇವತಾ ಟೋಪ ಜಾತ್ರಾ ಮಹೋತ್ಸವದ ಧರ್ಮಸಭೆಯಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅಭಿಮತ

# ಭಾರತದ ಸಂಸ್ಕೃತಿ ವಿಶ್ವಕ್ಕೇ ಮಾದರಿ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಭಾರತದ ಪುಣ್ಯ ಭೂಮಿಯಲ್ಲಿ ಅದೆಷ್ಟೋ ಸಾಧು ಸಂತರು, ಪುಣ್ಯ ಪುರುಷರು, ಮಠಾಧೀಶರು ಬದುಕಿ ಈ ಭೂಮಿಯನ್ನು ಪಾವನಗೊಳಿಸಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಅವರು ಪಟ್ಟಣದ ಗ್ರಾಮ ದೇವತಾ ಟೋಪ ಜಾತ್ರಾ ಮಹೋತ್ಸವದ ಧರ್ಮಸಭೆ-1ರಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು.

ಭಾರತ ದೇಶದ ಸಂಸ್ಕೃತಿ ಶ್ರೀಮಂತವಾದದ್ದು. ಇಂತಹ ಭೂಮಿಯಲ್ಲಿ ಹುಟ್ಟಿದ್ದೇ ನಮ್ಮ ಪುಣ್ಯ. ನಮ್ಮ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಹಸ್ತಾಂತರಿಸಲು ಇಂತಹ ಜಾತ್ರೆಗಳನ್ನು ಆಚರಿಸಲಾಗುತ್ತಿದೆ. ಮಹಿಳೆ ಶಕ್ತಿಯ ದ್ಯೋತಕ, ಸಮೃದ್ಧಿಯ ಸಂಕೇತ. ಹಾಗಾಗಿ ಮಹಿಳೆಯನ್ನು ಆರ್ಥಿಕವಾಗಿ ಸಬಲರನ್ನಾಗಿಸಲು ನಮ್ಮ ಸರಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದೆ. ನಮ್ಮ ಸರಕಾರ ಬಸವಣ್ಣ, ಬುದ್ಧ, ಅಂಬೇಡ್ಕರ್ ಅವರ ತತ್ವಗಳನ್ನು ಆದರ್ಶವಾಗಿಟ್ಟುಕೊಂಡು, ಮಹಾತ್ಮರು ಹಾಕಿ ಕೊಟ್ಟ ಮಾರ್ಗದಲ್ಲಿ ಆಡಳಿತ ನಡೆಸುತ್ತಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಭಾರತ ದೇಶವು ವಿವಿಧತೆಯಲ್ಲಿ ಏಕತೆಯನ್ನು ಹೊಂದಿದೆ. ಇಲ್ಲಿ ಜಾತಿ, ಮತ, ಪಂಥಗಳಿಲ್ಲದೇ ಎಲ್ಲರೂ ಸೌಹಾರ್ದತೆಯಿಂದ, ಸಹಬಾಳ್ವೆಯಿಂದ ಎಲ್ಲಾ ಹಬ್ಬ ಹರಿದಿನಗಳನ್ನು ಆಚರಣೆ ಮಾಡುವುದು ವಿಶೇಷವಾಗಿದೆ. ಶಕ್ತಿ ದೇವತೆಯ ಜಾತ್ರಾ ಮಹೋತ್ಸವ ಆಚರಣೆಯಿಂದ ದುಷ್ಟ ಶಕ್ತಿಗಳು ನಿಗ್ರವಾಗಿ ನಾಡಿಗೆ ಒಳಿತಾಗುವುದು ಎಂದರು

ಅಂತಾರಾಷ್ಟ್ರೀಯ ಖ್ಯಾತಿಯ ಹಿಂದೂಸ್ತಾನಿ ಗಾಯಕ ಪಂ. ಡಾ. ಎಂ.ವೆಂಕಟೇಶಕುಮಾರ ಅವರಿಂದ ಸಂಗೀತ ಸೇವೆ ಜರುಗಿತು. 3 ದಿನಗಳ ಕಾಲ ಅನ್ನ ಪ್ರಸಾದ ಸೇವೆ ಮಾಡುತ್ತಿರುವ ಶಿವಣ್ಣಾ ನೀಲಗುಂದ, ರಾಮಣ್ಣಾ ಕಮಾಜಿ, ಷಣ್ಮುಖಪ್ಪ ಬಡ್ನಿ ಕುಟುಂಬದವರಿಗೆ ಹಾಗೂ ಸೈನಿಕರಾಗಿ ಸೇವೆ ಸಲ್ಲಿಸುತ್ತಿರುವ ಯೋಧರನ್ನು ಸನ್ಮಾನಿಸಿ ಗೌರವಿಸಲಾಯಿತು. ನಂತರ ನಾಡಿನ ಹೆಸರಾಂತ ಕಲಾವಿದರಿಂದ ರಸಮಂಜರಿ ಕಾರ್ಯಕ್ರಮಗಳು ಜರುಗಿದವು.


ಕಾರ್ಯಕ್ರಮದ ಸಾನ್ನಿಧ್ಯವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು, ಬಳಗಾನೂರ ಚಿಕ್ಕೇನಕೊಪ್ಪದ ಶಿವಶಾಂತ ವೀರ ಶರಣರು ವಹಿಸಿದ್ದರು. ಅಧ್ಯಕ್ಷತೆಯನ್ನು ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಎಂ.ಡಿ. ಬಟ್ಟೂರ ವಹಿಸಿಕೊಂಡಿದ್ದರು. ಮಾಜಿ ಶಾಸಕ ಡಿ.ಆರ್. ಪಾಟೀಲ, ಪ.ಪಂ ಉಪಾಧ್ಯಕ್ಷರಾದ ಅನಸೂಯಾ ಸೋಮಗೇರಿ, ಗ್ರಾ.ದೇ. ಟ್ರಸ್ಟ್ ಉಪಾಧ್ಯಕ್ಷ ಅಶೋಕ ಸೋನಗೋಜಿ, ವಿ.ಎಸ್. ಮಾಳಿ, ರಾಮಣ್ಣಾ ಕಮಾಜಿ, ನಾಗರಾಜ ದೇಶಪಾಂಡೆ, ಬಸವರಾಜ ಹಾರೋಗೇರಿ, ಪರಶುರಾಮ ವಂಟಕರ, ಮನ್ಸೂರ ಹಣಗಿ, ತಾಜುದ್ದಿನ ಕಿಂಡ್ರಿ, ಪರಸಣ್ಣಾ ಸಂಗನಪೇಟಿ, ನಿಂಗಪ್ಪ ಕೊಲ್ಹಾರಿ ಹಾಗೂ ಮಂಜುನಾಥ ಮಟ್ಟಿ ಇದ್ದರು.




ಈ ಭಾಗದ ಸಚಿವರಾಗಿರುವ ಎಚ್.ಕೆ. ಪಾಟೀಲ ಅತ್ಯಂತ ಬುದ್ಧಿವಂತ, ಪ್ರಜ್ಞಾವಂತ ಸಚಿವರು. ಈ ಭಾಗದ ಅಭಿವೃದ್ಧಿಗಾಗಿ ಅವಿರತವಾಗಿ ಶ್ರಮಿಸುತ್ತಿದ್ದಾರೆ.

ಅಲ್ಲದೇ ಸವದತ್ತಿ ಯಲ್ಲಮ್ಮ ದೇವಿ ಪ್ರಾಧಿಕಾರ ರಚನೆ ಮಾಡುವ ಮೂಲಕ 110 ಕೋಟಿ ಅನುದಾನ ನೀಡಿದ್ದು ಶ್ಲಾಘನೀಯ ಕಾರ್ಯವಾಗಿದೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅಭಿಪ್ರಾಯ ವ್ಯಕ್ತಪಡಿಸಿದರು.

## 'ಲೋಕ ಜಾನಪದ' ತ್ರೈಮಾಸಿಕಕ್ಕೆ ಮೆಚ್ಚುಗೆ



■ ವಿಜಯಸಾಕ್ಷಿ ಸುದ್ದಿ, ಗದಗ

'ಲೋಕ ಜಾನಪದ' ತ್ರೈಮಾಸಿಕ ಪತ್ರಿಕೆ ಆರಂಭಿಸುವ ಮೂಲಕ ಜಾನಪದ ಕಲೆ, ಸಾಹಿತ್ಯ, ಸಂಗೀತ, ಸಂಸ್ಕೃತಿಯನ್ನು ಇಂದಿನ ಪೀಳಿಗೆಗೆ ಪರಿಚಯಿಸುವ ಹಾಗೂ ಅಕಾಡೆಮಿಯ ಕಾರ್ಯ ಚಟುವಟಿಕೆಗಳನ್ನು ದಾಖಲಿಸುವ ಮತ್ತು ಜನತೆಗೆ ತಲುಪಿಸುವ ಉದ್ದೇಶದಿಂದ ಕರ್ನಾಟಕ ಜಾನಪದ ಅಕಾಡೆಮಿಯು ಪತ್ರಿಕೆ ಆರಂಭಿಸಿದ್ದು ಶ್ಲಾಘನೀಯ ಕಾರ್ಯ ಎಂದು ಕರ್ನಾಟಕ ರಾಜ್ಯ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಸುರೇಶ ವಿ.ನಾಡಗೌಡರ ಮೆಚ್ಚುಗೆ ವ್ಯಕ್ತಪಡಿಸಿದರು.

ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರಾದ ಶಂಕ್ರಣ್ಣ ಸಂಕಣ್ಣವರಿಂದ ಕರ್ನಾಟಕ ಜಾನಪದ ಅಕಾಡೆಮಿಯಿಂದ ಆರಂಭಿಸಿದ 'ಲೋಕ ಜಾನಪದ' ಪತ್ರಿಕೆಯ ಪ್ರಥಮ ಸಂಚಿಕೆ ಸ್ವೀಕರಿಸಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಪತ್ರಕರ್ತ ಹಾಗೂ ಹವ್ಯಾಸಿ ರಂಗ ಕಲಾವಿದ ಮೌನೇಶ ಚಿ.ಬಡಿಗೇರ(ನರೇಗಲ್ಲ) ಮತ್ತು ವಿಶ್ವವಿದ್ಯಾಲಯದ ಕನ್ನಡ ಪ್ರಾಧ್ಯಾಪಕ ಚಂದ್ರಪ್ಪ ಬಾರಂಗಿ ಸೇರಿದಂತೆ ಹಲವರು ಹಾಜರಿದ್ದರು.

## ತೋಟಗಾರಿಕಾ ಬೆಳೆಗಾರರಿಂದ ಅರ್ಜಿ ಅಹ್ವಾನ

■ ವಿಜಯಸಾಕ್ಷಿ ಸುದ್ದಿ, ಡಂಬಳ

ಮುಂಡರಗಿ ತಾಲೂಕು ತೋಟಗಾರಿಕಾ ಬೆಳಗಾರರು ಮತ್ತು ಡಂಬಳ ಹೋಬಳಿಯ ತೋಟಗಾರಿಕೆ ಬೆಳೆಗಾರರಿಗೆ 2025-26ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯಿಂದ ವಿವಿಧ ಯೋಜನೆಗಳಡಿ ಸಹಾಯಧನ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಕೆಗೆ ಜೂ. 20 ಕೊನೆಯ ದಿನವಾಗಿದೆ. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ತೋಟಗಾರಿಕೆ ಬೆಳೆಗಳ ಹೊಸ ಪ್ರದೇಶ ವಿಸ್ತರಣೆ (ಹಣ್ಣು, ತರಕಾರಿ, ಹೂವು) ವೈಯಕ್ತಿಕ ನೀರು ಸಂಗ್ರಹಣಾ ಘಟಕಗಳು, ಮಿನಿ ಟ್ರ್ಯಾಕ್ಟರ್ (20 ಎಚ್.ಪಿಗಿಂತ ಕಡಿಮೆ ಸಾಮರ್ಥ್ಯ)ಗೆ ಸಹಾಯಧನ ಲಭ್ಯವಿರುತ್ತದೆ. ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಯೋಜನೆಯಡಿ ಕೃಷಿ ಯಾಂತ್ರೀಕರಣ ಉಪ ಅಭಿಯಾನ ತೋಟಗಾರಿಕೆಯಲ್ಲಿ ಯಾಂತ್ರೀಕರಣ ಕಾರ್ಯಕ್ರಮದಡಿ ಕೃಷಿ ಯಂತ್ರೋಪಕರಣ ಖರೀದಿಗೆ ಪ.ಜಾತಿ, ಪ.ಪಂಗಡ, ಸಣ್ಣ, ಅತಿ ಸಣ್ಣ ಮತ್ತು ರೈತ ಮಹಿಳೆಯರಿಗೆ ಶೇ.50ರಷ್ಟು ಮತ್ತು ದೊಡ್ಡ ರೈತರಿಗೆ ಶೇ.40ರಷ್ಟು ಸಹಾಯಧನ ನೀಡಲಾಗುವುದು.

ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಹನಿ ನೀರಾವರಿ ಅಳವಡಿಸಿ ಕೊಳ್ಳಲು ಗರಿಷ್ಠ 2 ಹೆಕ್ಟರ್‌ವರೆಗೆ ಶೇ.90ರಷ್ಟು ಎಲ್ಲ ರೈತರಿಗೆ ಸಹಾಯಧನ ನೀಡಲಾಗುವುದು. ಆಸಕ್ತ ತೋಟಗಾರಿಕೆ ರೈತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ, ತಾಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಮುಂಡರಗಿ ಕಚೇರಿಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಸನ್ಮಾರ್ಗ ಕಾಲೇಜಿನಲ್ಲಿ ಪುನಶ್ಚೇತನ ಕಾರ್ಯಕ್ರಮ




■ ವಿಜಯಸಾಕ್ಷಿ ಸುದ್ದಿ, ಗದಗ

ಜ್ಞಾನಾರ್ಜನೆಯಲ್ಲಿ ಶ್ರದ್ಧೆ, ವಿಶ್ವಾಸ, ಸಾಧಿಸಬೇಕೆನ್ನುವ ಛಲ ಇದ್ದಾಗ ಸಾಧನೆ ಸುಲಭ ಸಾಧ್ಯ ಎಂದು ಪ್ರೊ. ರೋಹಿತ್ ಒಡೆಯರ್ ಅಭಿಪ್ರಾಯಪಟ್ಟರು.

ನಗರದ ಸನ್ಮಾರ್ಗ ಪದವಿಪೂರ್ವ ಕಾಲೇಜಿನಲ್ಲಿ ಪ್ರಥಮ ಪಿಯುಸಿಗೆ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ಪುನಶ್ಚೇತನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸಂಸ್ಥೆಯ ಅಧ್ಯಕ್ಷ ಪ್ರೊ. ರಾಜೇಶ ಕುಲಕರ್ಣಿ ಮಾತನಾಡುತ್ತಾ, ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಸಂಸ್ಥೆ ಮತ್ತು ಕಾಲೇಜು ಸದಾ ಸನ್ನದ್ಧವಾಗಿದೆ.

ಇದರ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದು ಯಶಸ್ಸಿನ ಮೆಟ್ಟಿಲನ್ನು ಹತ್ತಲಿ ಎಂದು ಆಶಿಸಿದರು.

ಅಧ್ಯಕ್ಷೀಯ ನುಡಿಗಳನ್ನಾಡಿದ ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ವಿದ್ಯಾರ್ಥಿಗಳಲ್ಲಿ ಶಿಸ್ತು, ಸಂಸ್ಕಾರ, ಉತ್ತಮ ನೈತಿಕತೆ ಇರಲಿ ಎಂದರು. ವೇದಿಕೆಯಲ್ಲಿ ಪ್ರೊ. ಪುನೀತ ದೇಶಪಾಂಡೆ, ಪ್ರೊ. ರಾಹುಲ್ ಒಡೆಯರ್, ಪ್ರೊ. ಸೈಯ್ಯದ ಮತಿನ್ ಮುಲ್ಲಾ ಹಾಗೂ ಆಡಳಿತಾಧಿಕಾರಿ ಎಂ.ಸಿ. ಹಿರೇಮಠ ಉಪಸ್ಥಿತರಿದ್ದರು. ಕನ್ನಡ ಭಾಷಾ ಹಿರಿಯ ಉಪನ್ಯಾಸಕ ಪ್ರೊ. ಹೇಮಂತ ದಳವಾಯಿ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು.

## ಪರಿಸರ ಸಂರಕ್ಷಣೆ ಅತ್ಯಗತ್ಯ



■ ವಿಜಯಸಾಕ್ಷಿ ಸುದ್ದಿ, ಗದಗ

ವಾಯು ಮಾಲಿನ್ಯ ಮುಕ್ತ ಪರಿಸರ ನಿರ್ಮಾಣವಾದಾಗ ಮಾತ್ರ ವಿಶ್ವ ಪರಿಸರ ದಿನಾಚರಣೆಗೆ ಅರ್ಥ ಬರುತ್ತದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ರಮೇಶ ಮಡಿವಾಳರ ಹೇಳಿದರು.

ಸ್ಥಳೀಯ ಪ್ರಧಾನ ಅಂಚೆ ಕಚೇರಿ ಹಾಗೂ ವಿಭಾಗೀಯ ಕಚೇರಿ ಆಶ್ರಯದಲ್ಲಿ ಪ್ರಧಾನ ಅಂಚೆ ಕಚೇರಿ ಆವರಣದಲ್ಲಿ ಗುರುವಾರ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರೂ ಮನೆಗೊಂದು ಗಿಡ ನೆಟ್ಟು ಅದನ್ನು ಪೋಷಿಸಿ, ಬೆಳೆಸಿದಾಗ ಮಾತ್ರ ನಮ್ಮ ಪರಿಸರ ಸ್ವಚ್ಛವಾಗಿ ಮುಂದಿನ ಪೀಳಿಗೆಗೆ ಸ್ವಚ್ಛ ಪರಿಸರವನ್ನು ಕೊಡಲು ಸಾಧ್ಯ. ಪ್ರತಿಯೊಬ್ಬ ನೌಕರರು ನಿಮ್ಮ ಕಚೇರಿ ಹಾಗೂ ಸುತ್ತಮುತ್ತ ಪರಿಸರವನ್ನು ಸ್ವಚ್ಛ ಮತ್ತು ಸುಂದರವಾಗಿ ಇರಿಸುವ ಸಲುವಾಗಿ ಪ್ರತಿ ವಾರಕ್ಕೆ ಎರಡು ದಿನ ಶ್ರಮದಾನ ಮಾಡಬೇಕು ಎಂದರು.

ಗದಗ ಉಪ ವಿಭಾಗದ ಸಹಾಯಕ ಅಂಚೆ ಅಧೀಕ್ಷಕ ಶ್ರೀಕಾಂತ ಜಾದವ, ವಿಭಾಗೀಯ ಸಹಾಯಕ ಅಂಚೆ ಅಧೀಕ್ಷಕ ವಿ. ಸುನೀಲಕುಮಾರ, ರೋಣ ಉಪ ಅಂಚೆ ನಿರೀಕ್ಷಕ ವೆಂಕಟೇಶರಡ್ಡಿ ಕೊಳ್ಳಿ, ಪ್ರಧಾನ ಅಂಚೆ ಪಾಲಕರಾದ ಮಂಜುಳಾ ದೇಗಿನಾಳ, ಸಹಾಯಕ ಪ್ರಧಾನ ಅಂಚೆ ಪಾಲಕರಾದ ದೊಡ್ಡಪ್ಪ ಇಟಗಿ, ಶ್ರೀಕಾಂತ ತೆರದಾಳ, ಡಿ.ಜಿ. ಮ್ಯಾಗೇರಿ, ಶರಣಪ್ಪ ನಾಯ್ಕರ, ವೆಂಕಟೇಶ ಆಕಳವಾಡಿ, ಮನೋಹರ ಕಡಿಯವರ, ಸಿದ್ಧಲಿಂಗೇಶ ಯಂಡಿಗೇರಿ, ಉಮೇಶ ಸಂದಿಮನಿ, ವೆಂಕಪ್ಪ ಗುಗ್ಗರಿ ಮತ್ತಿತರರು ಉಪಸ್ಥಿತರಿದ್ದರು.

## ಇಂದು ತಾಲೂಕಿನಾದ್ಯಂತ ಬಕ್ರೀದ್ ಆಚರಣೆ

■ ವಿಜಯಸಾಕ್ಷಿ ಸುದ್ದಿ, ನರಗುಂದ

ತ್ಯಾಗ, ಬಲಿದಾನ ಸಂಕೇತವಾದ ಈದ್ ಉಲ್-ಅಧಾ ಬಕ್ರೀದ್ ಹಬ್ಬವನ್ನು ನರಗುಂದ ತಾಲೂಕಿನಾದ್ಯಂತ ಜೂ.7ರಂದು ಆಚರಿಸಲು ಅಂಜುಮನ್ ಎ-ಇಸ್ಲಾಂ ಚಂದ್ರ ಕಮಿಟಿ ನಿರ್ಧರಿಸಿದೆ.

ಜಿಲ್ ಹಜ್ಜ್ ತಿಂಗಳ 1446ರ ಹಿಜರಿ ಪ್ರಕಾರ ಬಕ್ರೀದ್ ಹಬ್ಬದ ಸಾಮೂಹಿಕ ಪ್ರಾರ್ಥನೆಯನ್ನು ಪಟ್ಟಣದ ದಂಡಾಪೂರ, ಹೊರಕೇರಿ, ಜಮಲಾಪೂರ ಹಾಗೂ ಪತ್ರೀವನಮಠದ ಹತ್ತಿರವಿರುವ ಈದ್ಗಾ ಮೈದಾನ ಸೇರಿದಂತೆ ತಾಲೂಕಿನ ವಿವಿಧ ಗ್ರಾಮಗಳ ಮುಸ್ಲಿಂ ಸಮಾಜದ ಈದ್ಗಾ ಮೈದಾನಗಳಲ್ಲಿ ಜೂ.7 ರಂದು ಬೆಳಿಗ್ಗೆ 9.30ಕ್ಕೆ ಸಲ್ಲಿಸಲಾಗುವುದು. ಅಂದು ಬೆಳಗ್ಗೆ ಮುಸ್ಲಿಂ ಸಮಾಜ ಬಾಂಧವರು ಸರಿಯಾದ ಸಮಯಕ್ಕೆ ಆಗಮಿಸಿ ಪ್ರಾರ್ಥನೆಯಲ್ಲಿ ಪಾಲ್ಗೊಳ್ಳುವಂತೆ ಅಂಜುಮನ್ ಕಮಿಟಿ ಅಧ್ಯಕ್ಷ ಐ.ಪಿ. ಚಂದೂನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ. 13ರಂದು ಪಿಂಚಣಿ ಅದಾಲತ್

■ ವಿಜಯಸಾಕ್ಷಿ ಸುದ್ದಿ, ಗದಗ

ವಿಭಾಗ ಮಟ್ಟದ ಪಿಂಚಣಿ ಅದಾಲತ್‌ನ್ನು ಜೂನ್ 13 ರಂದು ಬೆಳಿಗ್ಗೆ 11 ಗಂಟೆಗೆ ಗದಗ ವಿಭಾಗೀಯ ಅಂಚೆ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಅಂಚೆ ಪಿಂಚಣಿದಾರರು ತಮ್ಮ ಕುಂದುಕೊರತೆಗಳನ್ನು ಮೇಲ್ ವಿಳಾಸ dogadag.kar@indiapost.gov.in ಇಲ್ಲಿ ಕಳುಹಿಸಬಹುದಾಗಿದೆ. ಕುಂದುಕೊರತೆಗಳನ್ನು ಜೂನ್ 10 ರೊಳಗೆ ಸಲ್ಲಿಸಬಹುದಾಗಿದೆ ಎಂದು ಗದಗ ವಿಭಾಗದ ಅಂಚೆ ಅಧೀಕ್ಷಕರಾದ ರಮೇಶ ಮಡಿವಾಳರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ವೀರಶೈವ-ಲಿಂಗಾಯತ ಜಾತಿ ಹಾಗೂ ಉಪಜಾತಿಗೆ ಸೇರಿದ ಸಮುದಾಯದ ಜನರ (ಪ್ರವರ್ಗ-೩ಬ೩ಬ ಬಿ) ಅಭಿವೃದ್ಧಿಗಾಗಿ 2025-26ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಶೈಕ್ಷಣಿಕ ಸಾಲ ಯೋಜನೆಗಳು, ಜೀವಜಲ ಯೋಜನೆ, ಕಾಯಕ ಕಿರಣ ಯೋಜನೆ, ಭೋಜನಾಲಯ ಕೇಂದ್ರ, ವಿಭೂತಿ ನಿರ್ಮಾಣ ಘಟಕ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ, ಸ್ವ ಸಹಾಯ ಸಂಘಗಳಿಗೆ ಉತ್ತೇಜನ ಈ ಯೋಜನೆಗಳಲ್ಲಿ ಸೌಲಭ್ಯ ಪಡೆಯಬಯಸುವ ಫಲಾಪೇಕ್ಷಿಗಳಿಂದ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಜೂನ್ 30 ಆಗಿದ್ದು

ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು ಹಾಗೂ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡ್ ಮಾಡಿರಬೇಕು. ನಿಗಮವು ಅನುಷ್ಠಾನಗೊಳಿಸುವ ಈ ಮೇಲ್ಕಂಡ ಯೋಜನೆಗಳಲ್ಲಿ ಸರ್ಕಾರದ ವಿವೇಚನಾ ಕೋಟಾ ಮತ್ತು ನಿಗಮದ ಅಧ್ಯಕ್ಷರು/ ನಿರ್ದೇಶಕರ ಮಂಡಳಿಯ ವಿವೇಚನಾ ಕೋಟಾದಡಿ ಸೌಲಭ್ಯ ಪಡೆಯ ಬಯಸುವವರೂ ಸಹ ಆನ್‌ಲೈನ್ ನಲ್ಲಿಯೇ ಅರ್ಜಿಯನ್ನು ಸಲ್ಲಿಸುವುದು. ಒಂದು ಕುಟುಂಬದ ಒಬ್ಬ ಸದಸ್ಯರು ಮಾತ್ರ ಮೇಲ್ಕಂಡ ಯಾವುದಾದರೂ ಒಂದು ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ. ಅರ್ಹ ಫಲಾಪೇಕ್ಷಿಗಳು ಗ್ರಾಮ ಒನ್/ ಬೆಂಗಳೂರು ಒನ್/ ಕರ್ನಾಟಕ ಒನ್ ನಾಗರೀಕ ಸೇವಾ ಕೇಂದ್ರಗಳಲ್ಲಿ ದಾಖಲೆಗಳೊಂದಿಗೆ ಸೇವಾ ಸಿಂಧು ಪೋರ್ಟಲ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬೇಕಾಗಿರುತ್ತದೆ. ಒಂದು ಬಾರಿ ನಿಗಮದ ಯಾವುದಾದರೂ ಯೋಜನೆಯಲ್ಲಿ ಪ್ರಯೋಜನ ಪಡೆದಿದ್ದಲ್ಲಿ ಅಂತಹವರು ಹಾಗೂ ಅವರ ಕುಟುಂಬದವರು ಮತ್ತೊಮ್ಮೆ ಸೌಲಭ್ಯ ಕೋರಿ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ. 2023-24 ಹಾಗೂ 2024-25ನೇ ಸಾಲಿಗೆ ಅರ್ಜಿ ಸಲ್ಲಿಸಿ ಆಯ್ಕೆಯಾಗದವರು ಆದೇ ಯೋಜನೆಗೆ ಈ ವರ್ಷ ಮರು ಅರ್ಜಿ ಸಲ್ಲಿಸುವ ಅಗತ್ಯತೆ ಇರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ನಿಗಮದ ಜಾಲತಾಣ https://www.kaushalkar.com ಅಥವಾ ನಿಗಮದ ದೂರವಾಣಿ ಸಂಖ್ಯೆ 080 22865522/ 9900012351/ 9900012352ಅನ್ನು ಸಂಪರ್ಕಿಸುವುದು ಅಥವಾ ಜಿಲ್ಲಾ ವ್ಯವಸ್ಥಾಪಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ಕಚೇರಿ ಸಂ: 08372-232327 ನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.


**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.

ಇ ಮೇಲ್: uda-gadag@hotmail.com

ಸಂ: ನಅಪ್ರಾಗಬೆ/ಟೆಂಡರ್/381/2025-26 ದಿನಾಂಕ: 05.06.2025

**ಟೆಂಡರ್ ಪ್ರಕಟಣೆ**

ಕರ್ನಾಟಕ ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತರಾದ ಆಸಕ್ತಿಯುಳ್ಳ ಗುತ್ತೇದಾರರಿಂದ ಈ ಕೆಳಕಾಣಿಸಿದ ಕಾಮಾಗಾರಿಗೆ ಟೆಂಡರ್‌ನ್ನು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಟೆಂಡರ್ ಆಹ್ವಾನಿಸಲಾಗಿದೆ. ಇದಕ್ಕಾಗಿ ಗುತ್ತೇದಾರರು ಅಂತರ್‌ಜಾಲದಿಂದ ಮೂಲಕ ವೆಬ್‌ಸೈಟ್ ವಿಳಾಸ https://kppp.karnataka.gov.in/ನ್ನು ಸಂದರ್ಶಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿ ಬೇಕಾದಲ್ಲಿ ಗುತ್ತೇದಾರರು ಈ ಕೆಳಗೆ ಸಹಿ ಮಾಡಿದ ಅಧಿಕಾರಿಗಳ ಕಚೇರಿಯಲ್ಲಿ ಕಚೇರಿ ಕೆಲಸದ ವೇಳೆಯಲ್ಲಿ ಪಡೆಯಬಹುದಾಗಿರುತ್ತದೆ.

| ಕ್ರ. ಸಂ | ಕಾಮಗಾರಿಯ ವಿವರ | ಟೆಂಡರ್‌ಗೆ ಸೂಚಿಸಿದ ಅಂದಾಜು ಮೊತ್ತ(ಲಕ್ಷಗಳಲ್ಲಿ) |
|---|---|---|
| 1 | 2025-26ನೇ ಸಾಲಿಗೆ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ ಜಿಲ್ಲೆಗೆ ಅವಶ್ಯವಿರುವ 05 ವಿವಿಧ ಹುದ್ದೆಗಳನ್ನು ಹೊರಸಂಪನ್ಮೂಲದಿಂದ ಪಡೆಯಲು ಸಂಸ್ಥೆಯನ್ನು ಆಯ್ಕೆ ಮಾಡುವಕುರಿತು. | 15.56 |

**ಸೂಚನೆ:** ಕಾರಣಾಂತರಗಳಿಂದಾಗಿ ಈ ಕೆಳಗೆ ತಿಳಿಯಪಡಿಸಿದ ಟೆಂಡರ್ ದಿನಾಂಕಗಳು ಹಾಗೂ ಇನ್ನಿತರೆ ಯಾವುದೇ ಬದಲಾವಣೆಗಳಾದಲ್ಲಿ ಗುತ್ತೇದಾರರು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಗಮನಿಸಬಹುದಾಗಿದೆ.

**ಟೆಂಡರ್‌ಗಾಗಿ ನಿಗದಿಪಡಿಸಿದ ದಿನಾಂಕಗಳು ಕೆಳಗಿನಂತಿವೆ:**

| | | |
|---|---|---|
| 1 | ಟೆಂಡರ್‌ಆಕ್ಷೇಪಣೆಗಾಗಿ ನಿಗದಿಪಡಿಸಲಾದ ದಿನಾಂಕ | 17-06-2025 ರಂದು 12:00 ಗಂಟೆಗೆ |
| 2 | ಇ-ಪ್ರೊಕ್ಯೂರ್‌ಮಂಟ್ ಮುಖಾಂತರ ಟೆಂಡರನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ಸಮಯ | 18-06-2025 ರಂದು 16:00 ಗಂಟೆಗೆ |
| 3 | ತಾಂತ್ರಿಕ ಬಿಡ್, ಆರ್ಥಿಕ ಬಿಡ್‌ನ್ನು ತೆರೆಯುವ ದಿನಾಂಕ ಮತ್ತು ಸಮಯ. | 19-06-2025 16:30 ಗಂಟೆಗೆ |

ಟೆಂಡರ್‌ನಲ್ಲಿನ ಹೆಚ್ಚಿನ ಮಾಹಿತಿಗಾಗಿ ರಜಾ ದಿನಗಳನ್ನು ಹೊರತುಪಡಿಸಿ ಕಚೇರಿ ವೇಳೆಯಲ್ಲಿ ಅಥವಾ https://kppp.karnataka.gov.in/ ವೆಬ್‌ಸೈಟ್‌ನಲ್ಲಿ ಅಥವಾ ಈ ಕಚೇರಿಯ ದೂರವಾಣಿ ಸಂಖ್ಯೆ: 08372-278003 ರವರಿಂದ ಪಡೆಯಬಹುದಾಗಿದೆ ನಿಬಂಧನೆಗಳು (1) ಯಾವುದೇ ಕಾರಣಕ್ಕೂ ನಿಗದಿಪಡಿಸಿದ ಕೊನೆಯ ದಿನಾಂಕದಂದು ಸಂಪರ್ಕಜಾಲ (ಆನ್‌ಲೈನ್) ಸಿಗದಿದ್ದರೆ ಈ ಕಚೇರಿ ಜವಾಬ್ದಾರಿಯಾಗಿರುವುದಿಲ್ಲ (2) ಯಾವುದೇ ಟೆಂಡರ್ ಅಂಗೀಕರಿಸುವ ಅಥವಾ ತಿರಸ್ಕರಿಸುವ ಅಧಿಕಾರ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ ಇವರು ಕಾಯ್ದಿರಿಸಿಕೊಂಡಿರುತ್ತಾರೆ ಹಾಗೂ ಇನ್ನುಳಿದ ಎಲ್ಲಾ ಷರತ್ತುಗಳು ಅನ್ವಯವಾಗಿತ್ತದೆ.

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

ವಾ.ಸಾ.ಇ/ಗದಗ/95/ದೇಶಪಾಂಡೆಪಬ್ಲಿಸಿಟಿ/2025-26


## ಡ್ರೋನ್ ಪ್ರಾತ್ಯಕ್ಷಿಕೆ, ಪರಿಸರ ದಿನ ಆಚರಣೆ

■ ವಿಜಯಸಾಕ್ಷಿ ಸುದ್ದಿ, ನರಗುಂದ

2025-26ನೇ ಸಾಲಿನ ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆ ಅಂಗವಾಗಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ಐ.ಸಿ.ಎ.ಆರ್-ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಕರ್ನಾಟಕ ರಾಜ್ಯ ಕೃಷಿ ಇಲಾಖೆ ಹಾಗೂ ಇತರೆ ಅಭಿವೃದ್ಧಿ ಇಲಾಖೆಗಳ ಸಹಯೋಗದೊಂದಿಗೆ ಮೇ 29ರಿಂದ ಜೂನ್ 12ರವರೆಗೆ ಗದಗ ಜಿಲ್ಲೆಯ ಎಲ್ಲ ತಾಲೂಕುಗಳ ವಿವಿಧ ಗ್ರಾಮಗಳಲ್ಲಿ ಹಮ್ಮಿಕೊಂಡಿದೆ.

ಜೂನ್ 4ರಂದು ನರಗುಂದ ಶಹರ, ಚಿಕ್ಕನರಗುಂದ, ಕಣಕಿಕೊಪ್ಪ, ಶಿರೋಳ, ಖಾನಾಪೂರ, ಹಾಗೂ ಸುರಕೋಡ ಗ್ರಾಮಗಳಲ್ಲಿ ವಿಕಸಿತ ಕೃಷಿ ಸಂಕಲ್ಪ ಅಭಿಯಾನವನ್ನು ಆಯೋಜಿಸಲಾಗಿತ್ತು. ಕರ್ನಾಟಕ ಸರಕಾರದ ಕೃಷಿ ಇಲಾಖೆಯ ಸಹಾಯಕ ನಿರ್ದೇಶಕರು, ಕೃಷಿ ಅಧಿಕಾರಿಗಳು, ಆತ್ಮ ಸಿಬ್ಬಂದಿ, ಕೃಷಿ ಸಖಿಯರು, ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರುಗಳು, ಪಶು ಸಖಿಯರು, ಸ್ಥಳೀಯ ಚುನಾಯಿತ ಪ್ರತಿನಿಧಿಗಳು, ರೈತ ಮುಖಂಡರು ಈ ಅಭಿಯಾನದಲ್ಲಿ ಪಾಲ್ಗೊಂಡಿದ್ದರು. ಅಭಿಯಾನದಲ್ಲಿ ವಿಶೇಷವಾಗಿ ಡ್ರೋನ್ ಪ್ರಾತ್ಯಕ್ಷಿಕೆಯನ್ನು ಖಾನಾಪೂರ ಗ್ರಾಮದಲ್ಲಿ ಮಾಡಲಾಯಿತು.

ಡ್ರೋನ್ ದೀದಿಯವರು ಡ್ರೋನ್ ಬಳಸಿ ವಿವಿಧ ಬೆಳೆಗಳಿಗೆ ಪೋಷಕಾಂಶಗಳ ಸಿಂಪರಣಾ ವಿಧಾನವನ್ನು ವಿವರಿಸಿದರು. ಪರಿಸರ ದಿನಾಚರಣೆ ಅಂಗವಾಗಿ ತಾಲೂಕು ಪಂಚಾಯಿತಿ ಸಹಯೋಗದಲ್ಲಿ ಸಸಿ ನೆಡುವ ಕಾರ್ಯಕ್ರಮ ನೆರವೇರಿಸಲಾಯಿತು. ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಮುಂಗಾರು ಹಂಗಾಮಿನ ಅಡಿ ಅಭಿವೃದ್ಧಿ ಪಡಿಸಿದ ಮುಂಗಾರು ಬೆಳೆಗಳಾದ ಹೆಸರು, ಶೇಂಗಾ, ಸೂರ್ಯಕಾಂತಿ, ಗೋವಿನ ಜೋಳ, ಈರುಳ್ಳಿ ಬೆಳೆಗಳ ಕುರಿತ ಕೃಷಿ ಕೈಪಿಡಿಯನ್ನು ರೈತರಿಗೆ ನೀಡಲಾಯಿತು.



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka